ಸಂಪುಟ : 8 ಸಂಚಿಕೆ :297 ಪುಟ : 4 ಬೆಲೆ : 3.00 ಶನಿವಾರ ಜನವರಿ 6, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 297 Pages : 4 Price : 3.00 Saturday JANUARY 6, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಜನವರಿ 6 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ** : ವಾರ್ಡ್ ನಂ. 15, 16, 17 ಶಹಾಪುರ ಪೇಟೆ, ಭಜಂತ್ರಿ ಓಣಿ, ಡಿಸಿ ಮಿಲ್ ರೋಡ್, ಜವಳಗಲ್ಲಿ, ಮೀನಿನ ಮಾರ್ಕೆಟ್ ರೋಡ್, ಮಹೇಂದ್ರ ಕರ್ ಸರ್ಕಲ್ ಲೈನ್, ಗಾಂಧಿ ಸರ್ಕಲ್ ಲೈನ್, ಕರ್ನಾಟಕ ಟಾಕೀಸ್ ರೋಡ್, ಶುದ್ಧ ನೀರಿನ ಘಟಕದ ಲೈನ್, ಶರಣ ಬಸವೇಶ್ವರ ಗುಡಿ ಲೈನ್, ಗಣೇಶ ಗುಡಿ ಲೈನ್ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 25, 26 ಸಾಲಮನೆ, ಹಳೆ ಡಿಸಿ ಆಫೀಸ್ ಲೈನ್, ಕಮ್ಮಾರ ಸಾಲ, ಅಬ್ಬಿಗೇರಿ ಕಾಂಪೌಂಡ್ ಲೈನ್, ತೆಗ್ಗಿನ ಲಾಟ್, ಉಡಚಮ್ಮನ ಗುಡಿ ಲೈನ್, ಮಖಾನಗಲ್ಲಿ. ವಾರ್ಡ್ ನಂ. 8, 9,10 ಕಬಾಡೆ ರಸ್ತೆ, ಟಂಗಿನಕಾಯಿ ಬಜಾರ್ ರಸ್ತೆ, ಬಸವೇಶ್ವರ ದೇವಸ್ಥಾನದ ಲೈನ್, ಹೆಲ್ತ್ ಕ್ಯಾಂಪ್, ಕುರಹಟ್ಟಿ ಪೇಟೆ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 5, 6 ಸಿದ್ದಲಿಂಗ ನಗರ ರೊಟ್ಟಿಯವರ ಲೈನ್, ನಾವಳ್ಳಿಯವರ ಲೈನ್, ಮಂಜು ರವರ ಲೈನ್, ರೆಡ್ಡಿಯವರ ಲೈನ್, ಪಿಪಿ ಗುಡಿ ಹಿಂದಿನ ಭಾಗ, ಪೊಲೀಸ್ ರವರ ಮನೆ ಲೈನ್ ಉಳಿದ ಭಾಗಗಳು. ವಾರ್ಡ್ ನಂ. 2 ಸೆಟ್ಲಮೆಂಟ ಪೂರ್ತಿ ಭಾಗಗಳು, ಹರಣಶಿಕಾರಿ ಓಣಿ, ಗಾಂಧಿನಗರ ಮಾರುತಿ ಗುಡಿ ಲೈನ್, ಸ್ಲಾಬ್ ಮನೆ, ವೆಲ್ಫೇರ್.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ಅನ್ನುಮಾನ್' ವಾರ್ಷಿಕ ಸ್ನೇಹ ಸಮ್ಮೇಳನ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ವಾರ್ಷಿಕ ಸ್ನೇಹ ಸಮ್ಮೇಳನ 'ಅನ್ನುಮಾನ್' ಸಮಾರಂಭವು ಜ.7ರ ಸಂಜೆ 5 ಗಂಟೆಗೆ ಜರುಗಲಿದೆ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಆಗಮಿಸುತ್ತಿದ್ದು, ಅತಿಥಿಗಳಾಗಿ ಗದಗ ಜಿಲ್ಲಾ ಯುವ ಕಾಂಗ್ರೆಸ್‌ನ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಹೆಚ್.ಪಾಟೀಲ, ಅಧ್ಯಕ್ಷತೆಯನ್ನು ಸಂಸ್ಥೆಯ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ ವಹಿಸುವರು.

ಸಮಾರಂಭದಲ್ಲಿ ಸಂಸ್ಥೆಯ ನಿರ್ದೇಶಕರಾದ ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಪ್ರೊ. ಸಯ್ಯದ ಮತೀನ್ ಮುಲ್ಲಾ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ ಪಾಲ್ಗೊಳ್ಳುವರು. ಕಾಲೇಜಿನ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಸರ್ವರಿಗೂ ಸ್ವಾಗತ ಕೋರಿದ್ದಾರೆ.

'ಥರ್ಡ್ ಐ' ಕಣ್ತಪ್ಪಿಸಿ ಸಂಚಾರ ನಿಯಮ ಉಲ್ಲಂಘಿಸಿದವರ ವಿರುದ್ಧ ಪ್ರಕರಣ | ವಿಶೇಷ ಡ್ರೈವ್‌ನಲ್ಲಿ 500ಕ್ಕೂ ಹೆಚ್ಚು ಬೈಕ್‌ಗಳ ಜಪ್ತಿ

# ಅತಿ ಬುದ್ಧಿವಂತರಿಗೆ ಪೊಲೀಸ್ ಇಲಾಖೆ ಲಗಾಮು

■ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದ ಪ್ರಮುಖ ವೃತ್ತಗಳಲ್ಲಿ ಶುಕ್ರವಾರ ಪೊಲೀಸ್ ಸಿಬ್ಬಂದಿಗಳ ಓಡಾಟ ತುಸು ಜೋರಾಗಿಯೇ ಇತ್ತು. ಪ್ರಮುಖ ಮಾರ್ಗಗಳಲ್ಲಿ ಸಂಚರಿಸುವ, ಸರ್ಕಲ್ ಬಳಸಿ ಹಾದುಹೋಗುವ ವಾಹನ ಸವಾರರು ಅರೆಕ್ಷಣ ದಿಗಿಲಿಗೊಳಗಾಗುತ್ತಿದ್ದರು. ನಡುವೆ 'ಏಯ್ ನಂಬರ್

ಸಿಪಿಐ, ಪಿಎಸ್‌ಐ ನೇತೃತ್ವದ 6 ತಂಡಗಳ ಮೂಲಕ ಸ್ಪೆಷಲ್ ಡ್ರೈವ್ ಮೂಲಕ 500ಕ್ಕೂ ಹೆಚ್ಚು ನಂಬರ್ ಪ್ಲೇಟ್ ಇಲ್ಲದ, ನಂಬರ್ ಪ್ಲೇಟ್‌ಗೆ ಸ್ಟಿಕರ್ ಅಂಟಿಸಿ ಮರೆಮಾಚಿದ ಬೈಕ್ ಸವಾರರಿಂದ ದಂಡ ವಸೂಲಿ ಮಾಡಿದ್ದಾರೆ. ಒಂದೊಂದು ಸ್ಥಳದಲ್ಲಿಯೂ ಸುಮಾರು 50ರಿಂದ 100 ಬೈಕ್‌ಗಳನ್ನು ಸೀಜ್ ಮಾಡಲಾಗಿದೆ.



ಪ್ಲೇಟ್ ಇಲ್ಲಾ ನಿಲ್ಲೋ. ಏಯ್ ಈ ಬೈಕ್‌ಗೆ ನಂಬರ್ ಪ್ಲೇಟ್ ಇಲ್ಲ ಸೀಜ್ ಮಾಡು' ಇತ್ಯಾದಿ ಮಾತುಗಳೂ ಕೇಳಿಬರುತ್ತಿದ್ದವು. ಅವಳಿ ನಗರದಲ್ಲಿ ಟ್ರಾಫಿಕ್ ನಿಯಮಗಳ ಉಲ್ಲಂಘನೆ ಪ್ರಕರಣಗಳ ನಿಯಂತ್ರಣಕ್ಕೆ ಪೊಲೀಸ್ ಇಲಾಖೆ ವಿಶೇಷವಾದ 'ಥರ್ಡ್ ಐ' ಯೋಜನೆಯನ್ನು ಜಾರಿಗೊಳಿಸಿದೆ.

ಗದಗ ಜಿಲ್ಲಾ ಪೊಲೀಸ್ ವತಿಯಿಂದ ಟ್ರಾಫಿಕ್ ಕಾರ್ಯಾಚರಣೆ ನಡೆಸಿ, ದೋಷಪೂರಿತ ನಂಬರ್ ಪ್ಲೇಟ್ ಮತ್ತು ನಂಬರ್ ಪ್ಲೇಟ್ ಇಲ್ಲದ ವಾಹನ, ನಕಲಿ ನಂಬರ್ ಪ್ಲೇಟ್ ಹೊಂದಿದ ವಾಹನಗಳನ್ನು ವಶಪಡಿಸಿಕೊಂಡು ದಂಡ ವಿಧಿಸಿ, ಕಾನೂನು ಕ್ರಮ ಕೈಗೊಂಡಿದ್ದೇವೆ. ಪ್ರಸ್ತುತ ಹಾಗೂ ಮುಂದಿನ ದಿನಗಳಲ್ಲಿ 'ಥರ್ಡ್ ಐ' ಸಿಸಿ ಕ್ಯಾಮೆರಾಗಳಿಂದ ಕಣ್ತಪ್ಪಿಸಿಕೊಳ್ಳುವ ವಾಹನ ಚಾಲಕರ ವಿರುದ್ಧ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ.

– ಬಿ. ಎಸ್. ನೇಮಗೌಡ.
ಪೊಲೀಸ್ ವರಿಷ್ಠಾಧಿಕಾರಿಗಳು, ಗದಗ.

▸▸3ನೇ ಪುಟಕ್ಕೆ

ಇಂದಿರಾ ಕ್ಯಾಂಟೀನ್, ಶಾಲಾ ಊಟದಲ್ಲಿ ಸಿರಿಧಾನ್ಯ ಬಳಕೆ: ಸಿಎಂ ಘೋಷಣೆ

# ಸಿರಿಧಾನ್ಯ ಬಳಕೆ ಉತ್ತಮ ಆರೋಗ್ಯಕ್ಕೆ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಮ್ಮ ರಾಜ್ಯದ ಜನರು ಮತ್ತು ಶಾಲಾ ಮಕ್ಕಳು ಇನ್ನಷ್ಟು ಸದೃಢ, ಆರೋಗ್ಯವಂತರಾಗಲು ಇಂದಿರಾ ಕ್ಯಾಂಟೀನ್ ಮತ್ತು ಶಾಲಾ ಊಟದಲ್ಲಿ ಸಿರಿಧಾನ್ಯ ಬಳಸುವ ಕುರಿತು ಸದ್ಯದಲ್ಲೇ ಸಂಬಂಧಪಟ್ಟ ಇಲಾಖೆಗಳ ಸಭೆ ಕರೆದು ಚರ್ಚಿಸಿ ತೀರ್ಮಾನಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಹತ್ವದ ಘೋಷಣೆ ಮಾಡಿದರು.

ಅರಮನೆ ಮೈದಾನದಲ್ಲಿ ಕೃಷಿ ಇಲಾಖೆ ಆಯೋಜಿಸಿದ್ದ ಸಿರಿಧಾನ್ಯ ಮತ್ತು ಸಾವಯವ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ–2024, ಸಿರಿಧಾನ್ಯ ತಿನಿಸುಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಉತ್ತಮ ಗುಣಮಟ್ಟದ ಸಿರಿಧಾನ್ಯ ಬೀಜ ಉತ್ಪಾದನೆ, ಹೊಸ ತಳಿ ಅಭಿವೃದ್ಧಿ ಹಾಗೂ ಸಿರಿಧಾನ್ಯ




ರಫ್ತಿಗೆ ಅನುಕೂಲ ಆಗುವಂತೆ ಸಿರಿಧಾನ್ಯ ಬೆಳೆಗೆ ಪ್ರೋತ್ಸಾಹದಾಯಕವಾಗಿ ಅಗತ್ಯ ಕೇಂದ್ರವನ್ನು ರಾಜ್ಯ ಸರ್ಕಾರ ಸ್ಥಾಪಿಸಲಿದೆ ಎಂದು ಇದೇ ಸಂದರ್ಭದಲ್ಲಿ ಸಿಎಂ ಭರವಸೆ ನೀಡಿದರು.

ಕಡಿಮೆ ಮಳೆಯಾಗುವ ಪ್ರದೇಶ, ಭೂಮಿಯ ಫಲವತ್ತತೆ ಕಡಿಮೆ ಇರುವ ಪ್ರದೇಶಗಳಲ್ಲೂ ಬೆಳೆಯಬಹುದಾದ ಸಿರಿಧಾನ್ಯ ಉತ್ತಮ ಆರೋಗ್ಯಕ್ಕೆ ಬಹಳ ಸಹಕಾರಿ. ಇದಕ್ಕಾಗಿ ರಾಜ್ಯ ಸರ್ಕಾರ ನಿರಂತರವಾಗಿ ಸಿರಿಧಾನ್ಯ ಮೇಳವನ್ನು ಆಯೋಜಿಸುತ್ತಿದೆ ಎಂದರು.

ಇತ್ತೀಚಿನ ವರ್ಷಗಳಲ್ಲಿ ಸಾವಯವ ಮತ್ತು ಸಿರಿಧಾನ್ಯ ಹೆಚ್ಚು ಜನಪ್ರಿಯ ಆಗುತ್ತಿದೆ. ಭಾರತ ಕೃಷಿ ಪ್ರಧಾನ ದೇಶವಾದ್ದರಿಂದ ಆಹಾರ ಸ್ವಾವಲಂಬನೆ ಸಾಧಿಸಲು ಇಂದಿರಾಗಾಂಧಿ ಅವರ ಅವಧಿಯಲ್ಲಿ ಹಸಿರು ಕ್ರಾಂತಿ ನಡೆಸಲಾಯಿತು. ಪ್ರತಿಯೊಬ್ಬರಿಗೂ ಆಹಾರ ಒದಗಿಸಲು ಹಸಿರು ಕ್ರಾಂತಿ ನೆರವಾಯಿತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

▸▸3ನೇ ಪುಟಕ್ಕೆ

## ಯುವ ಪರಿವರ್ತಕರು, ಯುವ ಸಮಾಲೋಚಕರ ಆಯ್ಕೆಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜನ ಆರೋಗ್ಯ ಕೇಂದ್ರ ಎಪಿಡಿಮಿಯಾಲಜಿ ವಿಭಾಗ ರಾಷ್ಟ್ರೀಯ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ, ಬೆಂಗಳೂರು (ನಿಮ್ಹಾನ್ಸ್) ಇವರ ಸಹಯೋಗದೊಂದಿಗೆ ಆರಂಭಿಸಲಾಗಿರುವ ಯುವ ಸ್ಪಂದನ ಕೇಂದ್ರದಲ್ಲಿ ಗದಗ ಜಿಲ್ಲೆಗೆ 1 ಯುವ ಸಮಾಲೋಚಕರು, 7 ತಾಲೂಕುಗಳಲ್ಲಿ ಯುವ ಪರಿವರ್ತಕರಾಗಿ ಕಾರ್ಯ ನಿರ್ವಹಿಸಲಿಚ್ಛಿಸುವ 21 ರಿಂದ 35 ವಯೋಮಿತಿಯೊಳಗಿನ ಯುವಕ/ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ವಯೋಮಿತಿ 21 ರಿಂದ 35 ವರ್ಷದೊಳಗಿದ್ದು ಸಮುದಾಯದಲ್ಲಿ ಕೆಲಸ ಮಾಡಿರು ವವರನ್ನು ಅಪೇಕ್ಷಿಸಲಾಗಿದೆ. ಕನ್ನಡವನ್ನು ಸ್ಪಷ್ಟವಾಗಿ ಮಾತನಾಡುವುದು ಅವಶ್ಯವಾಗಿದೆ. ಪರಸ್ಪರ ಬಾಂಧವ್ಯಾಭಿವೃದ್ಧಿಯ ಕೌಶಲ್ಯ, ತರಬೇತಿ ನೀಡುವ ಕೌಶಲ್ಯ, ಸಂವಹನ ಮತ್ತು ಉಲ್ಲೇಖ ಸೇವೆಗಳಿಗೆ ಸಂಸ್ಥೆಗಳ ಜೊತೆ ಸಹಯೋಗ ಏರ್ಪಡಿಸುವ ಕೌಶಲ್ಯ ಇರಬೇಕು. ಸಾರ್ವಜನಿಕ ಮಾನಸಿಕ ಆರೋಗ್ಯ , ಸಂವರ್ಧನ ಸೇವೆಗಳ ಬಗ್ಗೆ ಸಮುದಾಯದಲ್ಲಿ ಕೆಲಸ ಮಾಡಲು ಆಸಕ್ತಿ ಹಾಗೂ ಹುಮ್ಮಸ್ಸು ಹೊಂದಿರಬೇಕು. ಗೌರವಧನ ಮತ್ತು ಅವಧಿ ಪ್ರಮಾಣೀಕೃತ ಅಭ್ಯರ್ಥಿಗಳಿಗೆ ತಿಂಗಳಿಗೆ ಗೌರವಧನ ರೂ.6,000/– ಹಾಗೂ ಪ್ರವಾಸ ಭತ್ಯೆ ತಿಂಗಳಿಗೆ ( ಗರಿಷ್ಟ ರೂ.1,000/–ಗಳವರೆಗೆ) 6 ತಿಂಗಳ ಕಾಲ ನೀಡಲಾಗುವುದು.

ಆಸಕ್ತ ಯುವಕ/ಯುವತಿಯರು ತಮ್ಮ ಸ್ವ ವಿವರಗಳೊಂದಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಇಲ್ಲಿ ಜನವರಿ 11 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ.

ಆಯ್ಕೆಯಾದ ಅಭ್ಯರ್ಥಿಗಳಿಗೆ ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ, ಬೆಂಗಳೂರು ( ನಿಮ್ಹಾನ್ಸ್ ) ಇಲ್ಲಿ ತರಬೇತಿ ನೀಡಲಾಗುವುದು. ಆಯ್ಕೆಯಾದ ಯುವ ಪರಿವರ್ತಕರಿಗೆ ಗೌರವ ಸಂಭಾವನೆ ಹಾಗೂ ಪ್ರವಾಸ ಭತ್ಯ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ. 08372–238345 ಸಂಪರ್ಕಿಸಬಹುದಾಗಿದೆ.

## ಬ್ರಹ್ಮಚೈತನ್ಯ ಮಹಾರಾಜರ ಆರಾಧನಾ ಮಹೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾನ್ ಸಂತ ಸದ್ಗುರು ಬ್ರಹ್ಮಚೈತನ್ಯ ಗೋಂದಾವಲೇಕರ ಮಹಾರಾಜರ 110ನೇ ಆರಾಧನಾ ಮಹೋತ್ಸವವು ಜ.6ರಂದು ಇಲ್ಲಿನ ತ್ರಿಕೂಟೇಶ್ವರ ದೇವಸ್ಥಾನದಲ್ಲಿ ನೆರವೇರಲಿದೆ. ಪ್ರಾತಃಕಾಲ 4.30 ಗಂಟೆಗೆ ಮಹಾರಾಜರಿಗೆ ಕಾಕಡಾರತಿ, 5.30ಕ್ಕೆ ಪಾದುಕಾಭಿಷೇಕ, 5.50ಕ್ಕೆ ಗುಲಾಲು, ಬುಕ್ಕಿಟ್ಟು ಮತ್ತು ಮಂಗಳಾರತಿ ನೆರವೇರಲಿದೆ.

ಪ್ರಾತಃಕಾಲ 6.10ಕ್ಕೆ ಸದ್ಗುರು ಉತ್ಸವಕ್ಕೆ ಸೇವೆ ಸಲ್ಲಿಸಿದವರ ಸ್ಮರಣೆ, ಬೆಳಿಗ್ಗೆ 6.30ಕ್ಕೆ ವೆ.ಮೂ. ರತ್ನಾಕರಭಟ್ಟ ಜೋಶಿ ಇವರಿಂದ ಪ್ರವಚನ, ಬೆಳಿಗ್ಗೆ 10.30



ಗಂಟೆಗೆ ಆಕಾಶವಾಣಿ ಕಲಾವಿದ ವೆಂಕಟೇಶ ಕುಲಕರ್ಣಿ ಹಾಗೂ ಮಾಲತಿ ಕುಲಕರ್ಣಿ ಇವರಿಂದ ಭಕ್ತಿ ಸಂಗೀತ, ಮಧ್ಯಾಹ್ನ 12 ಗಂಟೆಗೆ ಕೀರ್ತನ ಕೇಸರಿ ದಿಗಂಬರಶಾಸ್ತ್ರಿ ಕುರ್ತಕೋಟಿ ಇವರಿಂದ ಕೀರ್ತನೆ, ಮಧ್ಯಾಹ್ನ 12.30ಕ್ಕೆ ಡಾ.ರಾಜೀವ ಜೋಶಿ ಅವರಿಂದ ತ್ರಿಕೂಟೇಶ್ವರ ದೇವರಿಗೆ ಬುತ್ತಿ ಪೂಜೆ ನಂತರ 1.30ರಿಂದ 3 ಗಂಟೆಯವರೆಗೆ ಮಹಾಪ್ರಸಾದ ನೆರವೇರಲಿದೆ.

ಸಂಜೆ 7ಕ್ಕೆ ಮಂತ್ರಪುಷ್ಪ, ಅಷ್ಟಾವಧಾನ, ಮಹಾಮಂಗಳಾರತಿ, ಶೇಜಾರತಿಯೊಂದಿಗೆ ಕಾರ್ಯಕ್ರಮ ಸಂಪನ್ನಗೊಳ್ಳಲಿದೆ. ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಭಕ್ತಾಧಿಗಳು ಪಾಲ್ಗೊಂಡು ಮಹಾರಾಜರ ಕೃಪೆಗೆ ಪಾತ್ರರಾಗಬೇಕೆಂದು ಉತ್ಸವ ಮಂಡಳಿಯ ಅಧ್ಯಕ್ಷ ಬಾಬಣ್ಣ ನೀಲಗುಂದ ಹಾಗೂ ಮಂಡಳಿಯ ಸರ್ವ ಸದಸ್ಯರು ವಿನಂತಿಸಿದ್ದಾರೆ.

## ರಾಷ್ಟ್ರ ಮಟ್ಟದ ಕುಸ್ತಿ ಟ್ರಯಲ್ಸ್‌ನಲ್ಲಿ ಕರ್ನಾಟಕ ತಂಡಕ್ಕೆ ಆಯ್ಕೆಯಾದ ಗದಗ ವಿದ್ಯಾರ್ಥಿಗಳು

■ವಿಜಯಸಾಕ್ಷಿ ಸುದ್ದಿ, ಗದಗ

ಡಿ. 21 ರಿಂದ 25 ರವರೆಗೆ ದಾವಣಗೆರೆ ಜಿಲ್ಲೆಯ ಹರಿಹರ ಶಹರದಲ್ಲಿ ಜರುಗಿದ ರಾಜ್ಯ ಮಟ್ಟದ ಹೊನಲು ಬೆಳಕಿನ ಕುಸ್ತಿ ಪಂದ್ಯಾವಳಿ ಮತ್ತು ರಾಷ್ಟ್ರ ಮಟ್ಟಕ್ಕೆ ಕರ್ನಾಟಕ ತಂಡದ ಆಯ್ಕೆ ಕುರಿತು ನಡೆದ ಪಂದ್ಯಾವಳಿಗಳಲ್ಲಿ ಗದಗ ಜಿಲ್ಲೆಯ ವತಿಯಿಂದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ನಿಲಯದ ಈ ಕೆಳಕಂಡ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಪದಕವನ್ನು ಪಡೆದಿದ್ದಾರೆ.




ಭುವನೇಶ್ವರಿ ಶರಣಪ್ಪ ಕೋಳಿವಾಡ (15 ವರ್ಷ ಒಳಗೆ) ಪ್ರಥಮ, ಭುವನೇಶ್ವರಿ ಶರಣಪ್ಪ ಕೋಳಿವಾಡ (17 ವರ್ಷ ಒಳಗೆ) ಪ್ರಥಮ, ರಾಧಿಕಾ ವಿಶ್ವನಾಥ ತೊಂಡಿಹಾಳ (15 ವರ್ಷ ಒಳಗೆ) ಪ್ರಥಮ, ರಾಧಿಕಾ ವಿಶ್ವನಾಥ ತೊಂಡಿಹಾಳ (17 ವರ್ಷ ಒಳಗೆ) ದ್ವಿತೀಯ, ರಾಹುಲ ವಸಂತ ಸಿದ್ದಮ್ಮನಹಳ್ಳಿ (15 ವರ್ಷ ಒಳಗೆ) ದ್ವಿತೀಯ, ತೇಜಸ್ವಿನಿ ಬೀರಲಿಂಗೇಶ್ವರ ಬಿಂಗಿ (15 ವರ್ಷ ಒಳಗೆ) ದ್ವಿತೀಯ, ಕಾವ್ಯಾ ಪಾಂಡುರಂಗ ಜಾಧವ (15 ವರ್ಷ ಒಳಗೆ) ದ್ವಿತೀಯ, ವೈಷ್ಣವಿ ಈರಣ್ಣ ಇಮ್ಮಡಿಯವರ (15 ವರ್ಷ ಒಳಗೆ) ದ್ವಿತೀಯ, ವೈಷ್ಣವಿ ಈರಣ್ಣ ಇಮ್ಮಡಿಯವರ (17 ವರ್ಷ ಒಳಗೆ) ದ್ವಿತೀಯ, ತನುಜಾ ತಾನಾಜಿ ಕುರಾಡೆ (ಸಿನಿಯರ ವಿಭಾಗ) ದ್ವಿತೀಯ, ಜಾಹ್ನವಿ ಬಸವರಾಜ್ ಕುರಗೋಡ (15 ವರ್ಷ ಒಳಗೆ) ದ್ವಿತೀಯ, ವರಲಕ್ಷ್ಮಿ ರಾಜು ಕದಡಿ (17 ವರ್ಷ ಒಳಗೆ) ತೃತೀಯ, ಸ್ನೇಹಾ ಬಸವರಾಜ್ ಬಿನ್ನಾಳ (15 ವರ್ಷ ಒಳಗೆ) ತೃತೀಯ, ಆರೀಫಾ ಬಾಬುಸಾಬ ಕುಕನೂರ (15 ವರ್ಷ ಒಳಗೆ) ತೃತೀಯ, ಶಿವಕುಮಾರ ರುದ್ರಪ್ಪ ಅಂಗಡಿ (15 ವರ್ಷ ಒಳಗೆ) ತೃತೀಯ ಸ್ಥಾನ.

ಈ ಪೈಕಿ ಭುವನೇಶ್ವರಿ ಶರಣಪ್ಪ ಕೋಳಿವಾಡ ಮತ್ತು ರಾಧಿಕಾ ವಿಶ್ವನಾಥ ತೊಂಡಿಹಾಳ ಇವರು ರಾಷ್ಟ್ರ ಮಟ್ಟದಲ್ಲಿ ಜರುಗುವ ಪಂದ್ಯಾವಳಿಗೆ ಕರ್ನಾಟಕ ತಂಡಕ್ಕೆ ಆಯ್ಕೆಯಾಗಿದ್ದಾರೆ.

ಈ ಎಲ್ಲಾ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಹಾಗೂ ಕುಸ್ತಿ ತರಬೇತುದಾರರಾದ ವಿನಾಯಕ ಯಂಕಂಚಿ ಇವರಿಗೆ ರಾಜ್ಯದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಕೆ. ಪಾಟೀಲ ಅವರು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣಪ್ಪ ಗೋಗೇರಿ ಅಭಿನಂದಿಸಿದ್ದಾರೆ.

## ಮನೆ ಬಾಗಿಲಿಗೆ ಉಚಿತ ಮೊಬೈಲ್ ಕ್ಲಿನಿಕ್

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಕೆ. ಪಾಟೀಲ ಅವರ ಉಚಿತ ಆರೋಗ್ಯ ಶಿಬಿರ ಕಾರ್ಯಕ್ರಮದಡಿ ಶುಕ್ರವಾರ ಗದಗ–ಬೆಟಗೇರಿ ನಗರಸಭೆ ಸದಸ್ಯ ಕೃಷ್ಣಾ ಪರಾಪೂರ ನೇತೃತ್ವದಲ್ಲಿ 16ನೇ ವಾರ್ಡಿನ ಡೋರ ಗಲ್ಲಿಯಲ್ಲಿ ಮನೆಬಾಗಿಲಿಗೆ ಉಚಿತ ಆರೋಗ್ಯ ಶಿಬಿರವನ್ನು




ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಕೃಷ್ಣಾ ಪರಾಪೂರ, ಬಿ.ಪಿ ಹಾಗೂ ಬ್ಲಡ್ ಶುಗರ್ ಉಚಿತ ತಪಾಸಣೆ ನಡೆಸಲಾಗುತ್ತಿದ್ದು, ವಾರ್ಡ್‌ನ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು. ಈ ಸಂದರ್ಭದಲ್ಲಿ ಓಣಿಯ ಹಿರಿಯರಾದ ಕಲಂದರ ಮುಲ್ಲಾ, ಬಾದುಲ್ಲಾ ಬೇಗ್, ಪರಶುರಾಮ ಪಾತರೋಟ್ಟಿ, ಜಾಕಿರ ಪಠಾಣ, ಮಾಬುಸಾಬ ಸಿದ್ನೆಕೊಪ್ಪ, ರಿಯಾಜ ಕೊಪ್ಪಳ, ಲಕ್ಷ್ಮೀಬಾಯಿ ಸಂಪಂಗಿ, ಲದ್ವಾ, ಕುತೇಜಾ ಬೇಗ್, ಪರವಿಣ ಮುಜಾವರ, ಲಲಿತಾ ಓಂಕಾರ, ಯುವರಾಜ ಬಳ್ಳಾರಿ, ಗೋವಿಂದರಾಜ ಬಳ್ಳಾರಿ, ಪೃಥ್ವಿ ಪರಾಪೂರ, ಮಹೇಶ ನಾನಬಾಲ, ಸುಂಕಪ್ಪಾ ಗುತ್ತಿ ಮುಂತಾದವರು ಉಪಸ್ಥಿತರಿದ್ದರು.

## ಸಂಪಾದಕೀಯ

### ಇಂದಿರಾ ಕ್ಯಾಂಟೀನ್ ಕಥೆ ಕೇಳಿ

ಹಸಿವು ಮುಕ್ತ ಕರ್ನಾಟಕ ಎನ್ನುವ ಸಂಕಲ್ಪದೊಂದಿಗೆ ಈ ಹಿಂದಿನ ಸಿದ್ದರಾಮಯ್ಯ ಸರ್ಕಾರ ಇಂದಿರಾ ಕ್ಯಾಂಟೀನ್ ಆರಂಭಿಸಿತು. ಆರಂಭದಲ್ಲಿ ಎಲ್ಲವೂ ಸರಿಯಾಗಿಯೇ ನಡೆಯಿತು. ರಿಯಾಯಿತಿ ದರದಲ್ಲಿ ಉಪಹಾರ ನೀಡುವ ವ್ಯವಸ್ಥೆ ಜನರ ಗಮನ ಸೆಳೆಯಿತು.

ಮುಂದೆ ಅದೇ ಇಂದಿರಾ ಕ್ಯಾಂಟೀನ್‌ನಲ್ಲಿ ರಿಯಾಯಿತಿ ದರದಲ್ಲಿ ಊಟವನ್ನು ನೀಡಲು ಯೋಜನೆಯನ್ನ ರೂಪಿಸಲಾಯಿತು. ಬೆಂಗಳೂರಿನ ಇಂದಿರಾ ಕ್ಯಾಂಟೀನ್‌ಗಳಲ್ಲಿ ಪ್ರಾಯೋಗಿಕವಾಗಿ ಅದನ್ನು ಅನುಷ್ಠಾನಕ್ಕೂ ತರಲಾಯಿತು. ಮುಂದೆ ಬದಲಾದ ರಾಜಕೀಯ ಪರಿಸ್ಥಿತಿಯಿಂದಾಗಿ ಇಂದಿರಾ ಕ್ಯಾಂಟೀನ್ ಮಂಕಾದವು.

ಅದರಲ್ಲೂ ಹೊಸ ಸರ್ಕಾರ ಬಂದಾಗಿನಿಂದ ಇಂದಿರಾ ಕ್ಯಾಂಟೀನ್ ಆಟಕ್ಕುಂಟು ಲೆಕ್ಕಕ್ಕಿಲ್ಲದಂತೆ ನಡೆಯಿತು. ನಿರ್ವಹಣೆ ಕೊರತೆಯಿಂದಾಗಿ ಜನ ಇಂದಿರಾ ಕ್ಯಾಂಟೀನ್‌ಗಳತ್ತ ಸುಳಿಯದಂತಹ ವಾತಾವರಣ ನಿರ್ಮಾಣವಾಯಿತು.

ಆದರೆ ಮತ್ತೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂತು. ಇಂದಿರಾ ಕ್ಯಾಂಟೀನ್‌ಗಳಿಗೆ ಮರುಜೀವ ನೀಡುವ ಪ್ರಯತ್ನಗಳು ಆರಂಭವಾದವು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವಿದ್ದರೂ ಮೊದಲಿನಂತೆ ಇಂದಿರಾ ಕ್ಯಾಂಟೀನ್‌ಗಳು ಜನರನ್ನ ಸೆಳೆಯುವಲ್ಲಿ ವಿಫಲವಾದವು.

ಆದರೂ ಈ ಮಧ್ಯೆ ರಾಜ್ಯ ಸರ್ಕಾರ ಹೊಸದಾಗಿ 185 ಇಂದಿರಾ ಕ್ಯಾಂಟೀನ್ ತೆರೆಯುವ ನಿರ್ಧಾರ ಕೈಗೊಂಡಿರುವುದು ಚಿಂತನಾರ್ಹವಾಗಿದೆ. ಈಗಾಗಲೇ ಇರುವ ಇಂದಿರಾ ಕ್ಯಾಂಟೀನ್‌ಗಳು ನಿರ್ವಹಣೆ ಕೊರತೆಯಿಂದ ನರಳುತ್ತಿರುವಾಗ, ಹೊಸ ಇಂದಿರಾ ಕ್ಯಾಂಟೀನ್ ಬೇಕೇ ಎನ್ನುವ ಜಿಜ್ಞಾಸೆ ಮೂಡುತ್ತದೆ.

ಬಡವರಿಗೆ ರಿಯಾಯಿತಿ ದರದಲ್ಲಿ ಆಹಾರ ನೀಡುವುದು ಒಳ್ಳೆಯ ಕಾರ್ಯಕ್ರಮ. ಆದರೆ ಆ ಕಾರ್ಯಕ್ರಮ ಸಮರ್ಪಕವಾಗಿ ಅನುಷ್ಠಾನಗೊಳ್ಳಬೇಕು. ಈಗಾಗಲೇ ಇರುವ ಇಂದಿರಾ ಕ್ಯಾಂಟೀನ್‌ಗಳು ಆರಂಭದ ದಿನಗಳಲ್ಲಿ ಇದ್ದಂತೆ ಕಾರ್ಯನಿರ್ವಹಿಸಬೇಕು. ಜನ ಹೊಸ ಇಂದಿರಾ ಕ್ಯಾಂಟೀನ್ ಬೇಕು ಎನ್ನುವ ಬೇಡಿಕೆ ಸಲ್ಲಿಸಬೇಕು. ಆಗ ಮಾತ್ರ ಹೊಸ ಇಂದಿರಾ ಕ್ಯಾಂಟೀನ್ ನಿರ್ಮಾಣಕ್ಕೆ ಮುಂದಾದರೆ ಆ ಯೋಜನೆಗೊಂದು ಅರ್ಥ, ಸಾರ್ಥಕತೆ ಮೂಡಲು ಸಾಧ್ಯ. ಸರಕಾರ ಈ ಬಗ್ಗೆ ಚಿಂತನೆ ಮಾಡಬೇಕು.

**ವಾಯ್.ಎನ್. ಹಂಡಿ ಸೇವಾ ಪ್ರತಿಷ್ಠಾನದ ಉದ್ಘಾಟನಾ ಸಮಾರಂಭ, ಪರಿಸರಾನುಭವ ಶಿವಾನುಭವ ಮಾಲಿಕೆ**

# ಬದಲಾದ ಜೀವನ ಶೈಲಿಯಿಂದ ರೈತರ ಬದುಕು, ವೈಚಾರಿಕತೆ, ಪರಿಸರ ಹಾಳಾಗುತ್ತಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಮನೆಯಲ್ಲಿ ಸಂಸ್ಕಾರವಂತ ಹಿರಿಯರು ಇದ್ದರೆ, ಆ ಮನೆ ಮತ್ತು ಹಳ್ಳಿ ಸಮೃದ್ಧಿಯತ್ತ ಸಾಗುವುದು. ಇತ್ತೀಚಿನ ದಿನಮಾನಗಳಲ್ಲಿ ರೈತರ ಬದುಕು ಬಹಳ ಚಿಂತಾಜನಕವಾಗಿದೆ. ಬದಲಾದ ಜೀವನ ಶೈಲಿಯಿಂದಾಗಿ ಇವತ್ತು ನಮ್ಮ ರೈತರ ಬದುಕು, ಸಾಮಾಜಿಕ ವೈಚಾರಿಕತೆ ಮತ್ತು ಪರಿಸರ ಹಾಳಾಗುತ್ತಿದೆ. ನಾವು ಮಕ್ಕಳಿಗೆ ವಿದ್ಯೆ ಕಲಿಸಿ ಉನ್ನತ ವ್ಯಾಸಂಗಕ್ಕೆ ಕಳಿಸಿದರೂ, ಅವರನ್ನು ಮತ್ತೆ ನಮ್ಮ ಹಳ್ಳಿಯತ್ತ ಮುಖ ಮಾಡುವ ಹಾಗೆ ನಾವು ಸಂಸ್ಕಾರವನ್ನು ಕೊಡಬೇಕು. ಅಂದಾಗ ನಮ್ಮ ರೈತರ ಬದುಕು, ಸಮಾಜ ಉಳಿಯುವದು ಎಂದು ನಂದಿವೇರಿಮಠದ ಪೂಜ್ಯಶ್ರೀ ಶಿವಕುಮಾರ ಮಹಾಸ್ವಾಮಿಗಳು ನುಡಿದರು.

ಅವರು ಇತ್ತೀಚೆಗೆ ಇಲ್ಲಿನ ಮಲ್ಲಸಮುದ್ರದ ಶ್ರೀ ವೀರಭದ್ರೇಶ್ವರ ಜೀರ್ಣೋದ್ಧಾರ ಸೇವಾ ಸಮಿತಿಯ ಸಹಯೋಗದಲ್ಲಿ ವಾಯ್.ಎನ್. ಹಂಡಿ ಸೇವಾ ಪ್ರತಿಷ್ಠಾನದ ಉದ್ಘಾಟನೆ ಹಾಗೂ ಪರಿಸರಾನುಭವ ಶಿವಾನುಭವ ಮಾಲಿಕೆ-1 ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.




ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಕಪ್ಪತ್ತಗುಡ್ಡ ಉತ್ಸವದ ಪ್ರಧಾನ ಸಂಚಾಲಕ ಬಾಲಚಂದ್ರ ಜಾಬಶೆಟ್ಟಿ ಮಾತನಾಡುತ್ತ, ಬದಲಾದ ಬದುಕಿನ ಶೈಲಿ ನಮ್ಮ ಕೃಷಿ ಪದ್ಧತಿಗಳನ್ನು ಹಾಳುಮಾಡುತ್ತಿವೆ. ರೈತರ ಮನೆಯಲ್ಲಿ ದನಕರುಗಳಿಲ್ಲ, ಎತ್ತುಗಳು ಕೂಡಾ ಇಲ್ಲ. ಇದರಿಂದ ಹೊಲಕ್ಕೆ ಗೊಬ್ಬರ ಇಲ್ಲ. ಹೀಗಾಗಿ, ಜಮೀನಿಗೆ ಶಕ್ತಿಯೇ ಇಲ್ಲದಂತಾಗಿದೆ. ಅಷ್ಟೇ ಅಲ್ಲ, ಹಾಲು-ಮೊಸರು ಸೇವನೆಯೂ ಕಡಿಮೆಯಾಗಿ ರೈತನಲ್ಲಿ ಸದೃಢತೆ ಇಲ್ಲದಂತಾಗಿದೆ. ರೈತಾಪಿ ಬದುಕು ದಿನದಿನಕ್ಕೂ ಸೊರಗುತ್ತಿದೆ ಎಂದರು.

ಹಂಡಿ ಸೇವಾ ಪ್ರತಿಷ್ಠಾನದ ಅಧ್ಯಕ್ಷ ಪ್ರೊ. ಬಿ.ಎಸ್. ಹಿರೇಮಠ ಮಾತನಾಡಿ, ದಿ. ಯಲ್ಲಪ್ಪ ನೀಲಪ್ಪ ಹಂಡಿಯವರು ಬಹಳ ಉದಾರಿಗಳು. ಅನೇಕ ಬಡ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ್ದಾರೆ. ಇವರ ಹೆಸರಿನಲ್ಲಿ ಪ್ರತಿಷ್ಠಾನ ರಚನೆಯಾಗಿದ್ದು ಆಶಾದಾಯಕವಾಗಿದೆ. ಈ ಸಂಸ್ಥೆ ಮುಂದಿನ ದಿನಮಾನಗಳಲ್ಲಿ ಒಳ್ಳೆಯ ಕಾರ್ಯಕ್ರಮಗಳನ್ನು ಮಾಡಿ, ರೈತರ ಹಾಗೂ ವಿದ್ಯಾರ್ಥಿಗಳ ಭದ್ರ ಜೀವನಕ್ಕೆ ನೆರವಾಗಲಿ ಎಂದರು.

ಪ್ರತಿಷ್ಠಾನದ ಮುಖ್ಯ ರೂವಾರಿ ಡಾ. ಡಿ.ಸಿ. ಗಡ್ಡಿ ಮಾತನಾಡಿ, ಹಿಂದಿನ ದಿನಗಳಲ್ಲಿ ಹೆಣ್ಣು ಹೆತ್ತವರು ಮದುವೆಯ ಸಮಯದಲ್ಲಿ ಗಂಡಿನ ಮನೆಯ ಹಿತ್ತಲದಾಗ ಹೊಟ್ಟು, ಮೇವಿನ ಬಣವಿ ನೋಡಿ ಅವರ ಸಂಪತ್ತನ್ನು ಲೆಕ್ಕ ಹಾಕುತ್ತಿದ್ದರು. ಮಗಳು ಸುಖವಾಗಿರುವಳು ಎಂದು ಖುಷಿಯಿಂದ ಕನ್ಯಾದಾನ ಮಾಡುತ್ತಿದ್ದರು. ಆದರೆ ಇವತ್ತು ಅದೇ ದನ, ಬಣವಿ, ಧಾನ್ಯಗಳ ನಿಟ್ಟು ಇದ್ದರೆ ಆ ಮನೆಗೆ ಕನ್ಯಾದಾನ ಮಾಡುತ್ತಿಲ್ಲ. ಇದಕ್ಕೆ ಕಾರಣ, ನಮ್ಮ ಬದಲಾದ ಬದುಕಿನ ಶೈಲಿಯೇ ಆಗಿದೆ ಎಂದರು.

ಪ್ರಗತಿಪರ ಕೃಷಿಕ ಕಾಶಪ್ಪ ಹುಗ್ಗಿ, ಯುವ ಧುರೀಣ ಅನಿಲಗೌಡ ಪಾಟೀಲ, ನಿಂಗಪ್ಪ ದೇಸಾಯಿ, ಗ್ರಾಮದ ವೈದ್ಯರಾದ ಡಾ. ಕಲ್ಲೇಶ ಡಿ.ಮೂರಶಿಳ್ಳಿನ ಮುಂತಾದವರು ಪ್ರತಿಷ್ಠಾನದ ಕುರಿತು, ವಾಯ್.ಎನ್. ಹಂಡಿಯವರ ಕುರಿತು ಮಾತನಾಡಿದರು.

ವೇದಿಕೆಯಲ್ಲಿ ಹಿರಿಯರಾದ ವೀರಪ್ಪ ರು.ಅಕ್ಕಿ, ಚಂದ್ರಗೌಡ ಈ.ಪಾಟೀಲ, ಗ್ರಾ.ಪಂ ಉಪಾಧ್ಯಕ್ಷೆ ಶಶಿಕಲಾ ಹೊಸಮನಿ, ಸದಸ್ಯರಾದ ಮಂಜುನಾಥ ಅಕ್ಕಿ, ಪ್ರಕಾಶ ನಿಂ.ದೇಸಾಯಿ, ಮಾಬವ್ವ ಮ್ಯಾಗೇರಿ ಉಪಸ್ಥಿತರಿದ್ದರು. ಎಸ್.ಎಂ. ಜೀಗಳೂರ ಕಾರ್ಯಕ್ರಮ ನಿರೂಪಿಸಿದರು. ಮಂಜುನಾಥ ಅಕ್ಕಿ ವಂದಿಸಿದರು.

**ಬೆಳೆ ಸಮೀಕ್ಷೆ ಕುರಿತು ಪ್ರಾತ್ಯಕ್ಷಿಕೆ ಕೈಗೊಂಡ ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ**

# ಬೆಳೆ ಸಮೀಕ್ಷೆ ಮಾಹಿತಿ ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

'ನನ್ನ ಬೆಳೆ ನನ್ನ ಹಕ್ಕು' ಘೋಷಣೆಯಡಿ ಪ್ರಸಕ್ತ ಹಿಂಗಾರು ಹಂಗಾಮಿನಲ್ಲಿ ರೈತರೇ ಸ್ವತಃ ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ವಿವರವನ್ನು ಮೊಬೈಲ್ ಆ್ಯಪ್ ಮೂಲಕ ಛಾಯಾಚಿತ್ರ ಸಹಿತ ದಾಖಲಿಸುವ ಪ್ರಕ್ರಿಯೆ ಪ್ರಾರಂಭಗೊಂಡಿದೆ. ರೈತರೂ ಸ್ವತಃ ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ವಿವರ ದಾಖಲಿಸಿಕೊಳ್ಳಬೇಕು ಎಂದು ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ತಿಳಿಸಿದರು.

ಅವರು ಶುಕ್ರವಾರ ತಾಲೂಕಿನ ಬಸಾಪುರ ಗ್ರಾಮದ ರೈತರ ಜಮೀನಿನನಲ್ಲಿ ಬೆಳೆದ ಹಿಂಗಾರು ಹಂಗಾಮಿನ ಬೆಳೆ ವಿವರಗಳನ್ನು ಮೊಬೈಲ್ ಆ್ಯಪ್ ಮೂಲಕ ದಾಖಲಿಸುವ ಬಗ್ಗೆ ಪ್ರಾತ್ಯಕ್ಷಿಕೆ ಕೈಗೊಂಡರು. ರೈತರು ಬೆಳೆದ ಬೆಳೆಗಳ ಬಗ್ಗೆ ನಿಖರವಾಗಿ ಮಾಹಿತಿ ಪಡೆದುಕೊಳ್ಳಲು ಈಗಾಗಲೇ ಇ-ಆಡಳಿತ ವತಿಯಿಂದ ಅಭಿವೃದ್ಧಿಪಡಿಸಿರುವ ಮೊಬೈಲ್ ಆ್ಯಪ್ ಮೂಲಕ ಹಿಂಗಾರು ಬೆಳೆ ಸಮೀಕ್ಷೆ ನಡೆಸುವ ಕಾರ್ಯ ಡಿಸಂಬರ್ 30ರಿಂದ ಆರಂಭವಾಗಿದೆ. ರೈತರು ತಮ್ಮ ಮೊಬೈಲ್‌ನಲ್ಲಿ ಗೂಗಲ್ ಪ್ಲೇಸ್ಟೋರ್‌ನಿಂದ ಬೆಳೆ ಸಮೀಕ್ಷೆ ಹಿಂಗಾರು ಹಂಗಾಮಿನ ರಬಿ ಸೀಜನ್ ಕ್ರಾಪ್ ಸರ್ವೇ (ಖಚಿಭು ಖಜಭೆಂಟ ಈಚಿಡಿಟಜಡಿ ಅಡಿಶಿ ಖಣಡಿತಜಥ 2023-24) ಆ್ಯಪ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಬೆಳೆ ವಿವರ ದಾಖಲಿಸಬಹುದಾಗಿದೆ. ಸಮೀಕ್ಷೆ ವೇಳೆ ಜಮೀನಿಗೆ ಆಧಾರ್ ಕಾರ್ಡ್ ತೆಗೆದುಕೊಂಡು ಹೋಗಬೇಕು. ಆ್ಯಪ್‌ನಲ್ಲಿ ಆಧಾರ್ ಕ್ಯೂಆರ್ ಕೋಡ್‌ನ್ನು ಸ್ಕ್ಯಾನ್ ಮಾಡಿ ಮೊಬೈಲ್ ನಂಬರ್ ನಮೂದಿಸಿದರೆ ಮೊಬೈಲ್ ಸಂಖ್ಯೆಗೆ ಬರುವ ಓಟಿಪಿ ದಾಖಲಿಸಿದರೆ ಆ್ಯಪ್ ಸಕ್ರಿಯಗೊಳ್ಳುತ್ತದೆ. ಬಳಿಕ ಜಿಲ್ಲೆ, ತಾಲೂಕು, ಗ್ರಾಮ, ಸರ್ವೇ ನಂಬರ್, ಮಾಲಕರ ಹೆಸರು, ಕ್ಷೇತ್ರ, ಬೆಳೆ ವಿವರ ದಾಖಲಿಸಿ ಬೆಳೆಯ ಛಾಯಾಚಿತ್ರ ಅಪ್‌ಲೋಡ್ ಮಾಡಬೇಕು.



ಬೆಳೆ ಸಮೀಕ್ಷೆ ದತ್ತಾಂಶ ಮಾಹಿತಿಯನ್ನು ಬೆಳೆ ವಿಸ್ತರಣೆ ಎಣಿಕೆ ಕಾರ್ಯದಲ್ಲಿ, ಬೆಳೆ ಕಟಾವು ಪ್ರಯೋಗದಲ್ಲಿ, ಪ್ರಕೃತಿ ವಿಕೋಪ ಸಂದರ್ಭದಲ್ಲಿ, ಬೆಳೆಹಾನಿ ವರದಿ ಸಿದ್ಧಪಡಿಸಲು, ಬೆಳೆ ವಿಮಾ ಯೋಜನೆ, ಬೆಂಬಲ ಬೆಲೆ ಯೋಜನೆ, ಆರ್‌ಟಿಸಿಯಲ್ಲಿ ಬೆಳೆ ವಿವರ ದಾಖಲಿಸಲು, ರಾಷ್ಟ್ರೀಯ ಹಾಗೂ ಗ್ರಾಮೀಣ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಮಂಜೂರು ಮಾಡಲು ಬೆಳೆ ಸಮೀಕ್ಷೆ ಮಾಹಿತಿ ಅವಶ್ಯಕವಾಗಿದೆ.

ರೈತರು ತಾವೇ ಸ್ವತಃ ಬೆಳೆ ಸಮೀಕ್ಷೆ ಆ್ಯಪ್ ಮೂಲಕ ಬೆಳೆ ಮಾಹಿತಿಯನ್ನು ನಿಖರವಾಗಿ ನೀಡುವುದರಿಂದ ಮುಂಬರುವ ವ್ಯತ್ಯಾಸವನ್ನು ತಡೆಯಬಹುದಾಗಿದೆ. ಬೆಳೆ ಸಮೀಕ್ಷೆ ಕೈಗೊಳ್ಳಲು ಹೆಚ್ಚಿನ ಮಾಹಿತಿ ಬೇಕಾದಲ್ಲಿ ಪಿ.ಆರ್‌ಗಳನ್ನು/ಕೃಷಿ/ತೋಟಗಾರಿ-ಕೆ/ ಕಂದಾಯ ಇಲಾಖೆಯ ಸಿಬ್ಬಂದಿಗಳನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು. ಈ ವೇಳೆ ರೈತರಾದ ಯಲ್ಲಪ್ಪ ಬೇವಿನಮರದ, ನಾಗಪ್ಪ ಕಡೇಮನಿ, ಮಾಂತೇಶ ಉಮಚಗಿ, ನೀಲಪ್ಪ ಬೇವಿನಮರದ (ಪಿಆರ್), ಮಹೇಶ ನಂದೆಣ್ಣವರ, ಗ್ರಾಮ ಸಹಾಯಕರು ಇದ್ದರು.

## ಹೊರಟ್ಟಿಯವರಿಗೆ ಹೊಸ ವರ್ಷದ ಶುಭ ಕೋರಿದ ಸಿಬ್ಬಂದಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹೊಸ ವರ್ಷದ ನಿಮಿತ್ತ ಸಭಾಪತಿ ಬಸವರಾಜ ಹೊರಟ್ಟಿಯವರ ಕಚೇರಿಯ ಸಿಬ್ಬಂದಿ ವರ್ಗದವರು ಹೊರಟ್ಟಿ ಅವರಿಗೆ ಹೂಗುಚ್ಛ ಹಾಗೂ ಸಿಹಿ ನೀಡಿ ಹೊಸ ವರ್ಷದ ಶುಭಾಶಯಗಳನ್ನು ತಿಳಿಸಿ, ಆಶೀರ್ವಾದ ಪಡೆದರು.

ಕಳೆದ 40 ವರ್ಷಗಳಿಂದ ಶಿಕ್ಷಕರ ಬದುಕನ್ನು ಹಸನಾಗಿಸುವುದಕ್ಕಾಗಿ ತಮ್ಮ ಖಾಸಗಿ ಬದುಕನ್ನೇ ತ್ಯಾಗ ಮಾಡಿದ್ದಾರೆ. ಸಮಸ್ಯೆ ಹೇಳಿಕೊಂಡು ಯಾರೇ ಬಂದರೂ, ಅವರ ಸಮಸ್ಯೆಗೆ ಪರಿಹಾರ ಒದಗಿಸಿಕೊಟ್ಟು ಅವರ ಮುಖದಲ್ಲಿ ನಗು ಮೂಡಿಸಿದ ಕೀರ್ತಿ ಹೊರಟ್ಟಿ ಅವರಿಗೆ ಸಲ್ಲುತ್ತದೆ. ನಮ್ಮನ್ನು ಸಾಕಷ್ಟು ಗೌರವಿಸುವುದರ ಜೊತೆಗೆ ಸದಾ ಮಾರ್ಗದರ್ಶನ ನೀಡುವ ಮೂಲಕ ಪ್ರತೀ ಸಿಬ್ಬಂದಿಯನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪ್ರೀತಿಯಿಂದ ಕೆಲಸ ಮಾಡಿಸುತ್ತಾರೆ. ಇಂತಹ ಹಿರಿಯರ ಹಾಗೂ ಅಪಾರ ಅನುಭವಿಗಳ ಅಡಿಯಲ್ಲಿ ಕೆಲಸ ಮಾಡುತ್ತಿರುವುದು ನಮಗೆಲ್ಲ ಹೆಮ್ಮೆಯ ಸಂಗತಿ ಎಂದು ಸಿಬ್ಬಂದಿಗಳು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಭಾಪತಿ ಅವರ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ, ವಿಶೇಷ ಕರ್ತವ್ಯ ಅಧಿಕಾರಿ ಡಾ. ಮಹೇಶ್ ವಾಳ್ವೇಕರ್, ಕಚೇರಿಯ ಹಿರಿಯ ಅಧಿಕಾರಿಗಳಾದ ಎಚ್.ಡಿ. ಪಾಟೀಲ್, ಮಧು ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಟಿಟಿಸಿ ನರಗುಂದ ಕೇಂದ್ರದಲ್ಲಿ ಸರ್ಕಾರದ ವಿವಿಧ ಯೋಜನೆಗಳ ಅಡಿಯಲ್ಲಿ ಉಚಿತ ಕೌಶಲ್ಯ ತರಬೇತಿಗಳನ್ನು ಬರುವ ಮಾರ್ಚ್ ತಿಂಗಳಿನಿಂದ ಪ್ರಾರಂಭಿಸಲಾಗುವುದು. 2024-25ನೇ ಸಾಲಿನಲ್ಲಿ ಗದಗ ಜಿಲ್ಲೆಯ ಸುಮಾರು 400 ಯುವಕ-ಯುವತಿಯರಿಗೆ ಉಚಿತ ಕೌಶಲ್ಯ ತರಬೇತಿ ನೀಡಿ ಕೈಗಾರಿಕೆಗಳಲ್ಲಿ ಉದ್ಯೋಗ ಕಲ್ಪಿಸಲು ಯೋಜನೆ ರೂಪಿಸಲಾಗಿರುತ್ತದೆ. ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ' ಅಡಿ ನರಗುಂದದಲ್ಲಿ ಸಿ.ಎನ್.ಸಿ. ಪ್ರೋಗ್ರಾಮಿಂಗ್, ಸಿ.ಎನ್.ಸಿ. ಆಪರೇಟಿಂಗ್, ಕ್ಯಾಡ್-ಕ್ಯಾಮ್, ಎಲೆಕ್ಟ್ರಿಶಿಯನ್, ಮಷಿನಿಸ್ಟ್ ಮತ್ತು ಡಾಟಾ ಎಂಟ್ರಿ ಆಪರೇಟರ್ ವೃತ್ತಿಗಳಲ್ಲಿ ಉಚಿತ ಕೌಶಲ್ಯ ತರಬೇತಿ ನೀಡಲಾಗುವುದು.

ಎಸ್.ಎಸ್.ಎಲ್.ಸಿ, ಐಟಿಐ, ಡಿಪ್ಲೋಮಾ, ಬಿ.ಇ ಪಾಸಾದ 16 ರಿಂದ 35 ವಯೋಮಿತಿಯೊಳಗಿನ ಎಲ್ಲ ವರ್ಗದ ಅಭ್ಯರ್ಥಿಗಳು ಈ ತರಬೇತಿಗಳನ್ನು ಪಡೆಯಲು ಅರ್ಹರಿರುತ್ತಾರೆ. ಜಿಟಿಟಿಸಿ ಈ ಕೌಶಲ್ಯ ತರಬೇತಿಗಳನ್ನು ಪ್ರತಿ ತಿಂಗಳು ಆಯೋಜಿಸಲಿದೆ. ತರಬೇತಿ ಪೂರ್ಣಗೊಳಿಸುವ ಅಭ್ಯರ್ಥಿಗಳಿಗೆ ಕೈಗಾರಿಕೆಗಳಲ್ಲಿ ಉದ್ಯೋಗ ಒದಗಿಸಲಿದೆ. ಆಸಕ್ತರು ಜಿಟಿಟಿಸಿಯ ನರಗುಂದ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಕೊನೆಯ ದಿನ ಜನವರಿ 19 ಆಗಿದ್ದು ಹೆಚ್ಚಿನ ಮಾಹಿತಿಗಾಗಿ ಮೊಬೈಲ್: 7975762499 ಮತ್ತು 9902101010 ಸಂಪರ್ಕಿಸಬಹುದಾಗಿದೆ ಎಂದು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಮಾರುತಿ ಭಜಂತ್ರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ರಮವಾಗಿ ಸಾಗಿಸುತ್ತಿದ್ದ 27 ಕ್ವಿಂ. ಪಡಿತರ ಅಕ್ಕಿ ವಶಕ್ಕೆ




■ವಿಜಯಸಾಕ್ಷಿ ಸುದ್ದಿ,ಶಿರಹಟ್ಟಿ

ತಾಲೂಕಿನ ಸುಗ್ನಳ್ಳಿ-ಬೆಳ್ಳಟ್ಟಿ ಮಾರ್ಗದಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 27 ಕ್ವಿಂಟಲ್ ಪಡಿತರ ಅಕ್ಕಿ ವಶಪಡಿಸಿಕೊಂಡು ಆಹಾರ ನಿರೀಕ್ಷಕಿ ಮಂಜುಳಾ ಆಕಳದ ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಜ.5ರಂದು ಬೆಳಗಿನ ಜಾವ ಸುಗ್ನಳ್ಳಿ-ಬೆಳ್ಳಟ್ಟಿ ರಸ್ತೆಯ ಮಾರ್ಗದಲ್ಲಿ ಖಾಸಗಿ ವಾಹನದಲ್ಲಿ ಅನಧಿಕೃತವಾಗಿ ಸಾಗಾಟ ಮಾಡುತ್ತಿದ್ದ 91,800 ರೂ.ಗಳ ಕಿಮ್ಮತ್ತಿನ, ಒಟ್ಟೂ 54 ಪ್ಲಾಸ್ಟಿಕ್ ಚೀಲಗಳಲ್ಲಿದ್ದ 27 ಕ್ವಿಂಟಲ್ ಪಡಿತರ ಅಕ್ಕಿಯನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿತರ ಮೇಲೆ ಸಾರ್ವಜನಿಕ ವಿತರಣಾ ಪದ್ಧತಿ ನಿಯಂತ್ರಣಾ ಆದೇಶದ ಅಡಿಯಲ್ಲಿ ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಕೊಂಡಿದ್ದಾರೆ.

# ಯುವನಿಧಿ ಯೋಜನೆಯಡಿ ನೋಂದಣಿಗೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರದ ಪಂಚಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ "ಯುವನಿಧಿ" ಯೋಜನೆಯಡಿ 2023ನೇ ವರ್ಷದಲ್ಲಿ ತೇರ್ಗಡೆ-ಯಾದ ದಿನಾಂಕದಿಂದ 180 ದಿನಗಳು ಕಳೆದರೂ ಉದ್ಯೋಗ ಲಭಿಸದ ಪದವೀಧರರು ಮತ್ತು ಡಿಪ್ಲೋಮಾ ಪಡೆದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಕರ್ನಾಟಕ ಯುವನಿಧಿ ಯೋಜನೆಯಡಿ ಪದವಿದರರಿಗೆ ರೂ.3000/- ಹಾಗೂ ಡಿಪ್ಲೋಮಾದವರಿಗೆ ರೂ.1500/- ಮಾಸಿಕ ನಿರುದ್ಯೋಗ ಭತ್ಯೆಯನ್ನು ನೀಡಲು ಈಗಾಗಲೇ ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಕೆ ಆರಂಭವಾಗಿದ್ದು, ಇದುವರೆಗೆ ಗದಗ ಜಿಲ್ಲೆಯಲ್ಲಿ ಒಟ್ಟು 712 ಅಭ್ಯರ್ಥಿಗಳು ಈ ಯೋಜನೆಯಡಿ ನೋಂದಣಿಯನ್ನು ಮಾಡಿಕೊಂಡಿದ್ದಾರೆ.

ಜನವರಿ-12 ರಂದು ಶಿವಮೊಗ್ಗದಲ್ಲಿ ಮುಖ್ಯಮಂತ್ರಿಗಳು ಈ ಯೋಜನೆಗೆ ಚಾಲನೆ ನೀಡಲಿದ್ದಾರೆ. ಅರ್ಹ ಅಭ್ಯರ್ಥಿಗಳ ಆಧಾರ್ ಕಾರ್ಡ್ ಜೋಡಣೆ ಹೊಂದಿರುವ ಬ್ಯಾಂಕ್ ಖಾತೆಗೆ ಡಿ.ಬಿ.ಟಿ. ಮೂಲಕ ನೇರವಾಗಿ ನಗದು ವರ್ಗಾವಣೆ ಮಾಡಲಾಗುವುದು. ಇನ್ನುಳಿದ ಅರ್ಹ ಫಲಾನುಭವಿಗಳೂ ಸಹ ಸೇವಾಸಿಂಧು ಪೋರ್ಟಲ್ https://sevasindhugs.karnataka.gov.in ಗೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳಬಹುದು. ಕರ್ನಾಟಕ ಒನ್, ಗ್ರಾಮಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿಯೂ ಕೂಡಾ ನೋಂದಣಿಯನ್ನು ಮಾಡಿಕೊಳ್ಳುವದರ ಮೂಲಕ ಸದರಿ ಯೋಜನೆಯ ಸೌಲಭ್ಯ ಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ಸಿಇಟಿ ವಿದ್ಯಾರ್ಥಿ ಮಿತ್ರ' ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಲಾಗಿರುವ 'ಸಿಇಟಿ ವಿದ್ಯಾರ್ಥಿ ಮಿತ್ರ' ಕಾರ್ಯಾಗಾರವನ್ನು ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ಎಲ್ಲ ವಿಜ್ಞಾನ ಕಾಲೇಜುಗಳ ಉಪನ್ಯಾಸಕರುಗಳಿಗೆ ಇಲ್ಲಿನ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಕಾಲೇಜಿನ ಪ್ರಭಾರಿ ಪ್ರಾಚಾರ್ಯ ಮಂಜುನಾಥ ಕೊಕ್ಕರಗುಂದಿ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕರ್ನಾಟಕ ವಿಜ್ಞಾನ ಪರಿಷತ್‌ನ ಜಿಲ್ಲಾಧ್ಯಕ್ಷ ಆರ್.ಎಫ್. ಹಳೆರಿತ್ತಿ ಕಾರ್ಯಾಗಾರದ ಔಚಿತ್ಯದ ಕುರಿತು ಮಾಹಿತಿ ನೀಡಿ, ಸಿಇಟಿ ಆನ್‌ಲೈನ್ ಅರ್ಜಿಯನ್ನು ತುಂಬುವಾಗ ವಿದ್ಯಾರ್ಥಿಗಳಿಗೆ ವಿಜ್ಞಾನ ಉಪನ್ಯಾಸಕರು ನೆರವಾಗಬೇಕು ಎಂದರು.



ಸಿಇಟಿ ವಿದ್ಯಾರ್ಥಿಮಿತ್ರ ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗ್ಯಲಕ್ಷ್ಮೀ ಜೆ ಪಾಲ್ಗೊಂಡು ಮಾಹಿತಿ ನೀಡಿದರು. ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ ಎಲ್ಲ ವಿಜ್ಞಾನ ಉಪನ್ಯಾಸಕರು ಉಪಸ್ಥಿತರಿದ್ದರು. ಉಪನ್ಯಾಸಕ ಆರ್.ಎಂ. ಬಡಿಗೇರ್ ಸ್ವಾಗತಿಸಿದರು, ನಾಗಪ್ಪ ಸಾತಪುತೆ ಕಾರ್ಯಕ್ರಮ ನಿರೂಪಿಸಿದರು. ವಿನಾಯಕ ವೇತಾಳ ವಂದಿಸಿದರು.

# ರಾಷ್ಟ್ರ ನಿರ್ಮಾಣದಲ್ಲಿ ಯುವಜನತೆಯ ಪಾತ್ರ; ಜ.8ರಂದು ಭಾಷಣ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ಜನವರಿ 12 ರಂದು ಜರುಗುವ ಸ್ವಾಮಿ ವಿವೇಕಾನಂದ ಜಯಂತಿ ಅಂಗವಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕಾಲೇಜು ಶಿಕ್ಷಣ ವತಿಯಿಂದ ಜಿಲ್ಲಾ ಮಟ್ಟದಲ್ಲಿ ಪದವಿ, ಸ್ನಾತಕೋತ್ತರ ಮತ್ತು ವೃತ್ತಿಪರ ಕಾಲೇಜುಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ರಾಷ್ಟ್ರ ನಿರ್ಮಾಣದಲ್ಲಿ ಯುವಜನತೆಯ ಪಾತ್ರ ಎಂಬ ವಿಷಯವಾಗಿ ಭಾಷಣ ಸ್ಪರ್ಧೆಯನ್ನು ಜನವರಿ 8 ರಂದು ಬೆ 10 ಗಂಟೆಗೆ ಸರಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರ ಮತ್ತು ಕೆ.ಐ.ಎ.ಡಿ.ಬಿ. ವಸಾಹತು ಪ್ರದೇಶ, ನಾಗಸಮುದ್ರ ರಸ್ತೆ, ನರಸಾಪುರ, ಬೆಟಗೇರಿ-ಗದಗ ಇಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಸ್ಪರ್ಧೆಯಲ್ಲಿ ಗದಗ ಜಿಲ್ಲೆಯ ಎಲ್ಲ ಸರಕಾರಿ/ ಅನುದಾನಿತ/ ಅನುದಾನರಹಿತ ಮತ್ತು ಬಿ.ಇಡಿ ಕಾಲೇಜುಗಳ ವತಿಯಿಂದ ಕನಿಷ್ಠ ಇಬ್ಬರು ವಿದ್ಯಾರ್ಥಿಗಳು ತಮ್ಮ ಕಾಲೇಜು ಪ್ರಾಂಶುಪಾಲರಿಂದ ಪಡೆದ ಅನುಮತಿ ಪತ್ರದೊಂದಿಗೆ ಹಾಜರಾಗಲು ತಿಳಿಸಲಾಗಿದೆ. ಭಾಷಣ ಸ್ಪರ್ಧೆಯ ಸಮಯ ಒಬ್ಬರಿಗೆ 4 + 1 ನಿಮಿಷಗಳನ್ನು ನಿಗದಿಪಡಿಸಲಾಗಿದೆ.

ಹೆಚ್ಚಿನ ವಿವರಗಳಿಗಾಗಿ ಪ್ರೊ. ಕೇಶವ ಪ್ರಹ್ಲಾದಾಚಾರ್, ಆಂಗ್ಲ ಭಾಷಾ ಪ್ರಾಧ್ಯಾಪಕರು, ಮೊ.ಸಂ. 9980439692 ಮತ್ತು ಡಾ. ಪಿ.ಎಚ್. ಕ್ಯಾರಕೊಪ್ಪ , ರಾಜ್ಯ ಶಾಸ್ತ್ರ ಪ್ರಾಧ್ಯಾಪಕರು ಇವರ ಮೊಬೈಲ್ ಸಂಖ್ಯೆ 9481528086 ಸಂಪರ್ಕಿಸಬಹುದಾಗಿದೆ.

## ಅನ್ನ ಸಂತರ್ಪಣೆ, ಮಹಾ ಪೂಜೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಬುಳ್ಳಾನವರ ತೋಟದ ಮಣಿಕಂಠ ಸನ್ನಿಧಾನ ಸೇವಾ ಸಮಿತಿ ವತಿಯಿಂದ ಜ.6ರಂದು ಮಧ್ಯಾಹ್ನ 12.45ಕ್ಕೆ ಅನ್ನ ಸಂತರ್ಪಣೆ ಹಾಗೂ ಸಾಯಂಕಾಲ 7.30ಕ್ಕೆ ಅಯ್ಯಪ್ಪ ಸ್ವಾಮಿಯ ಮಹಾ ಪೂಜೆ ಜರಗಲಿದೆ.

ಜ.8ರ ಮುಂಜಾನೆ 8 ಗಂಟೆಗೆ ಗಣಹೋಮ, ನಂತರ 10 ಗಂಟೆಗೆ ಇರುಮುಡಿ ಕಟ್ಟಿ ಶಬರಿಮಲೈ ಯಾತ್ರೆಗೆ ಹೊರಡುತ್ತಿದ್ದು, ಎಲ್ಲ ಅಯ್ಯಪ್ಪ ಭಕ್ತರು ಆಗಮಿಸಿ ಪಾಲ್ಗೊಳ್ಳಬೇಕು ಎಂದು ವಿರೂಪಾಕ್ಷ ಗುರುಸ್ವಾಮಿ, ನಾಗರಾಜ ಗುರುಸ್ವಾಮಿಗಳು ಆನಂದ ಗುರುಸ್ವಾಮಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ಗ್ರಾಮ ಒನ್' ಫ್ರಾಂಚೈಸಿ ಆಯ್ಕೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಇಡಿಸಿಎಸ್ ನಿರ್ದೇಶನಾಲಯ ಮತ್ತು ಇ-ಆಡಳಿತ ಇಲಾಖೆಯಿಂದ ಜಿಲ್ಲೆಯ ಕುಂದಗೋಳ ತಾಲೂಕಿನ ಬರದ್ವಾಡ ಗ್ರಾಮದಲ್ಲಿ ಒಂದು ಗ್ರಾಮ್ ಒನ್ ಕೇಂದ್ರಕ್ಕಾಗಿ ಫ್ರಾಂಚೈಸಿಯನ್ನು ಆಯ್ಕೆ ಮಾಡಲು ಆನ್‌ಲೈನ್ ಮೂಲಕ (https://www.karnatakaone.gov.in/Public/GramOneFranchiseeTerms) ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜನವರಿ 15 ಕೊನೆಯ ದಿನವಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪಿ.ಯು.ಸಿ., ಐ.ಟಿ.ಐ, ಡಿಪ್ಲೊಮಾ, ಪದವಿ ಮತ್ತು ಸ್ನಾತ್ತಕೋತ್ತರ ಪದವಿಯೊಂದಿಗೆ ಕಂಪ್ಯೂಟರ್ ಜ್ಞಾನವುಳ್ಳವರಾಗಿರಬೇಕು. ಗ್ರಾಮ ಒನ್ ಕೇಂದ್ರ ಸ್ಥಾಪಿಸಲು ಕನಿಷ್ಟ 100 ಚದರ ಅಡಿ ವಿಸ್ತೀರ್ಣವುಳ್ಳ ಸುಸಜ್ಜಿತ ಕಟ್ಟಡದೊಂದಿಗೆ ಕಂಪ್ಯೂಟರ್, ಪ್ರಿಂಟರ್, ಸ್ಕ್ಯಾನರ್, ಬಯೋಮೆಟ್ರಿಕ್ ಡಿವೈಸ್ ಮತ್ತು 8 ಗಂಟೆಗಳ ವಿದ್ಯುತ್ ಪರ್ಯಾಯ ವ್ಯವಸ್ಥೆಯೊಂದಿಗೆ ಇಲಾಖೆ ಕಾಲಕಾಲಕ್ಕೆ ಸೂಚಿಸುವ ಮಾನದಂಡಗಳಿಗೆ ಬದ್ಧರಾಗಿರುವವರು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹೆಲ್ಪ್‌ಡೆಸ್ಕ್ ಮೊಬೈಲ್ ಸಂಖ್ಯೆ-9019026687, 9019026697, 9019026690, 9019027696ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೀವ ವೈವಿಧ್ಯತೆಯ ರಕ್ಷಣೆ ನಮ್ಮ ಪ್ರಥಮ ಆದ್ಯತೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಮನುಕುಲದ ಭವಿಷ್ಯ ಚೆನ್ನಾಗಿರಬೇಕಾದರೆ ಜೀವ ವೈವಿಧ್ಯತೆ ಕಾಪಾಡಿಕೊಳ್ಳಬೇಕಾದದ್ದು ಹಿಂದೆಂದಿಗಿಂತಲೂ ಈಗ ಹೆಚ್ಚಿದೆ. ಪರಿಸರದ ರಕ್ಷಣೆ ಮಾಡುವಲ್ಲಿ ಯುವ ಜನಾಂಗ ಆಸಕ್ತಿ ವಹಿಸಬೇಕು ಎಂದು ಧಾರವಾಡ ವಿಭಾಗದ ಅರಣ್ಯ ಸಂರಕ್ಷಕರಾದ ಶ್ರೀಮತಿ ದೀಪಿಕಾ ಬಾಜಪಾಯಿ ತಿಳಿಸಿದರು.



ಶಿರಹಟ್ಟಿಯ ಎ.ಪಿ.ಪೂಜಾರ ಸರಕಾರಿ ಪದವಿ ಪೂರ್ವ ಕಾಲೇಜು ಶಿರಹಟ್ಟಿಯಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಸಹಯೋಗದಲ್ಲಿ ಗುರುವಾರದಂದು ನಡೆದ ಜೀವ ವೈವಿಧ್ಯತೆಯ ಕುರಿತು ವಿದ್ಯಾರ್ಥಿಗಳೊಂದಿಗಿನ ಸಂವಾದದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ರಾಷ್ಟ್ರೀಯಸೇವಾ ಯೋಜನೆಯ ಸಮರ್ಥ ಶಿಬಿರಾರ್ಥಿಗಳು ಸೇವೆಗಾಗಿ ನಾವು ಎಂಬ ಧೋರಣೆ ಅಳವಡಿಸಿಕೊಂಡು ಹಸಿರೀಕರಣ ಮಾಡುವ ಪಣ ತೊಡಬೇಕು. ದೇಶ ರಕ್ಷಣೆ ಮತ್ತು ಪರಿಸರ ಸಂರಕ್ಷಣೆಯಲ್ಲಿ ಯಾವಾಗಲೂ ಮುಂದಿರಬೇಕು. ಪರಿಸರ ಮಾಲಿನ್ಯ ತಡೆಯುವಲ್ಲಿ ಕಾರ್ಯೋನ್ಮುಖರಾಗಿ ಕೆಲಸ ಮಾಡಬೇಕೆಂದರು.

ವಿಜಯಪುರದ ಎನ್.ಎಸ್.ಎಸ್. ಅಧಿಕಾರಿ ಎಂ.ಎಸ್.ಮುಲ್ಲಾ ಎನ್.ಎಸ್.ಎಸ್.ದ ಧ್ಯೇಯೋದ್ದೇಶಗಳು ಹಾಗೂ ಶಿಬಿರಾರ್ಥಿಗಳು ಮಾಡಬೇಕಾದ ಕೆಲಸದ ಬಗ್ಗೆ ವಿಸ್ತಾರವಾಗಿ ತಿಳಿಸಿದರು.

ಶಿರಹಟ್ಟಿಯ ವಲಯ ಅರಣ್ಯಾಧಿಕಾರಿ ರಾಮಪ್ಪ ಅವರು ಅರಣ್ಯೀಕರಣದ ಮಹತ್ವ ಕಪ್ಪತಗುಡ್ಡದ ಪ್ರಾಮುಖ್ಯತೆ ಕುರಿತು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ಬಿ.ಜಿ.ಗಿರಿತಿಮ್ಮಣ್ಣವರ ಅವರು ಮಾತನಾಡಿ, ಗ್ರೀನ್ ಯಾನದ ಮುಂದುವರೆದ ಭಾಗವಾಗಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸುತ್ತಾ ಕಾರ್ಯಕ್ರಮದ ಮಹತ್ವ ಕುರಿತು ವಿವರಿಸಿದರು.

ಯಲ್ಲಮ್ಮ ಹೊಸೂರ ಹಾಗೂ ರಾಧಿಕಾ ಪಲ್ಲೇದ ಪ್ರಾರ್ಥಿಸಿದರು. ಎನ್.ಎಸ್.ಎಸ್. ಕಾರ್ಯಕ್ರಮದ ಎಸ್.ವೈ.ಮುಜಾವರ ಸ್ವಾಗತಿಸಿದರು. ಶ್ರೀಮತಿ ಪರಿಮಳ ವಂದನಾರ್ಪಣೆ ಮಾಡಿದರು. ಶ್ರೀಮತಿ ರಾಜೇಶ್ವರಿ ಸಂಶಿ ಕಾರ್ಯಕ್ರಮ ನಿರೂಪಿಸಿದರು.

# ಕೆಸಿಸಿ ಬೆಟಗೇರಿ ಶಾಖೆಯಿಂದ ಉತ್ತಮ ಸೇವೆ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ಭಾಗದ ಜನರು, ನೇಕಾರರ ಸೊಸೈಟಿ ಹಾಗೂ ಇತರೆ ಸಂಘ-ಸಂಸ್ಥೆಯವರು ನಮ್ಮ ಬ್ಯಾಂಕಿನೊಂದಿಗೆ ವ್ಯವಹರಿಸಿದರೆ ಉತ್ತಮ ಸೇವೆ ನೀಡುತ್ತೇವೆ ಎಂದು ಕೆಸಿಸಿ ಬ್ಯಾಂಕ್ ನಿರ್ದೇಶಕ ಎಂ.ಎಫ್. ಕಲಗುಡಿ ಹೇಳಿದರು.




ಅವರು ಬೆಟಗೇರಿಯ ಕೆಸಿಸಿ ಬ್ಯಾಂಕ್‌ನ ಆವರಣದಲ್ಲಿ 'ಹೊಸಬೆಳಕು-2024' ಕಾರ್ಯಕ್ರಮದಲ್ಲಿ ಹೊಸ ಠೇವು ಸಂಗ್ರಹಣೆ, ಸಾಲ ವಿತರಣೆ ಹಾಗೂ ನೂತನ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಶಿವಣ್ಣ ಮುಳುಗುಂದ, ಅಮರೇಶ ಚಾಗಿ, ಅನಿಲಕುಮಾರ ಗಡ್ಡಿ, ಬಸವರಾಜ ಇಂಡಿ, ಲೋಕನಾಥ ಇಂಡಿ ಮುಂತಾದವರು ಮಾತನಾಡಿ, ಬ್ಯಾಂಕ್‌ನ ಬೆಟಗೇರಿ ಶಾಖೆಯು ಈ ಭಾಗದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ನಾವು ಕೂಡ ಬ್ಯಾಂಕಿನ ಅಭಿವೃದ್ಧಿಗಾಗಿ ಎಲ್ಲ ರೀತಿಯ ಸಹಾಯ-ಸಹಕಾರ ನೀಡುತ್ತೇವೆ ಎಂದು ಹೇಳಿದರು.

ನಿವೃತ್ತ ಪ್ರಧಾನ ವ್ಯವಸ್ಥಾಪಕ ವಿ.ಬಿ. ಪಾಟೀಲ, ಪ್ರಕಾಶ್ ಕುಲಕರ್ಣಿ, ಶಿವಪುತ್ರಪ್ಪ ಇಟಗಿ, ದೇವೇಂದ್ರಗೌಡ ಮಡೇಗೌಡ್ರು, ಬಸವರಾಜ ಇಂಡಿ ಸೇರಿದಂತೆ ಸಂಘದ ಪದಾಧಿಕಾರಿಗಳು, ಗ್ರಾಹಕರು, ರೈತರು ಬ್ಯಾಂಕಿನ ಸೇವೆಯನ್ನು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ನೋಡೆಲ್ ಅಧಿಕಾರಿ ರಾಜೇಶ್ವರಿ ಮುರುಗೋಡ ಭಾಗವಹಿಸಿದ್ದರು. ಶಾಖಾ ವ್ಯವಸ್ಥಾಪಕಿ ಲತಾ ಹಾಳಕೇರಿ ಸ್ವಾಗತಿಸಿದರು. ಸುನೀಲ್ ಚಳಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿ.ವಿ. ನಿಂಗೋಜಿ ಕಾರ್ಯಕ್ರಮ ನಿರೂಪಿಸಿದರು. ಶಾಖಾ ಸಿಬ್ಬಂದಿಗಳಾದ ಸುರೇಶಕುಮಾರ ಎಸ್., ವಿಶ್ವನಾಥ ಲಮಾಣಿ, ಆರ್.ಸಿ. ಅಂಗಡಿ, ಕೆ.ಕೆ. ಜೋಗಿನ, ಎಸ್.ಸಿ. ಜಾಲಗಾರ ಮುಂತಾದವರು ಉಪಸ್ಥಿತರಿದ್ದರು.

## ಕೇಂದ್ರ ಸರಕಾರದಿಂದ ಜನಪರ ಯೋಜನೆ




■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಕೇಂದ್ರದಲ್ಲಿ ಪ್ರಧಾನಿ ಮೋದಿಯವರು ಉತ್ತಮ ಆಡಳಿತ ನಡೆಸುತ್ತಿದ್ದು, ಬಡವರ ಆರೋಗ್ಯ, ಶಿಕ್ಷಣ ಮತ್ತಿತರ ಮೂಲಸೌಲಭ್ಯಗಳಿಗೆ ಆದ್ಯತೆ ನೀಡುತ್ತಿದ್ದಾರೆ. ಸರಕಾರದಿಂದ ಜನಪ್ರಿಯ ಯೋಜನೆಗಳು ಜಾರಿಯಾಗಿವೆ ಎಂದು ರೋಣ ಮಾಜಿ ಶಾಸಕ ಕಳಕಪ್ಪ ಬಂಡಿ ಹೇಳಿದರು.

ತಾಲೂಕಿನ ಹಾರೋಗೇರಿ ಗ್ರಾಮದಲ್ಲಿ ವಿಕಸಿತ ಭಾರತ ಸಂಕಲ್ಪಯಾತ್ರೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿ, ಆಯುಷ್ಮಾನ್ ಯೋಜನೆಯಿಂದ ಅನೇಕರು ರೋಗಮುಕ್ತರಾಗಿದ್ದಾರೆ. ಸಾರ್ವಜನಿಕರು ಕೇಂದ್ರ ಸರಕಾರದ ಈ ಯೋಜನೆಯ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ರವಿ ಕರಿಗಾರ, ಅಂದಪ್ಪ ಹಾರೋಗೇರಿ, ಮುದ್ಲಿಂಗಪ್ಪ ಕೊರ್ಲಹಳ್ಳಿ, ಫಕ್ಕೀರಪ್ಪ ಉಳ್ಳಾಗಡ್ಡಿ, ಶಿವಪ್ಪ ಅಂಕದ, ಪಿ.ಡಿ. ಪಾಟೀಲ, ವಾಸುಗೌಡ ಪಾಟೀಲ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಬ್ಯಾಂಕ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಆಯುಷ್ಮಾನ್ ಕಿರುಚಿತ್ರ ಪ್ರದರ್ಶಿಸಲಾಯಿತಲ್ಲದೆ, ಉಜ್ವಲ ಯೋಜನೆಯ ಸಿಲಿಂಡರ್ ವಿತರಿಸಲಾಯಿತು.

## ಅತಿ ಬುದ್ಧಿವಂತರಿಗೆ ಪೊಲೀಸ್ ಇಲಾಖೆ ಲಗಾಮು

▸▸ಮೊದಲನೇ ಪುಟದಿಂದ



ಆದರೆ, ಪೊಲೀಸ್ ಇಲಾಖೆಗೂ ಚಳ್ಳೆಹಣ್ಣು ತಿನ್ನಿಸಲು ಮುಂದಾದ ಬೈಕ್ ಹಾಗೂ ಇನ್ನಿತರ ವಾಹನ ಚಾಲಕರು ನಂಬರ್ ಪ್ಲೇಟ್ ಅಸ್ಪಷ್ಟವಾಗಿ ಕಾಣುವಂತೆ ಮಾಡುವುದು, ನಂಬರ್ ಮರೆಮಾಚುವಂತೆ ಸ್ಟಿಕ್ಕರ್ ಅಂಟಿಸುವುದು, ನಕಲಿ ನಂಬರ್ ಪ್ಲೇಟ್ ಅಳವಡಿಕೆಯ ಮೂಲಕ 'ಥರ್ಡ್ ಐ'ಗೂ ಮೋಸ ಮಾಡಿ ಬಚಾವಾಗುತ್ತಿದ್ದರು.

ವಾಹನ ಸವಾರರ ಈ ನಕಲಿ ಆಟಕ್ಕೆ ಬ್ರೇಕ್ ಹಾಕಲು ಪೊಲೀಸ್ ಇಲಾಖೆ ಬೇರೆಯದೇ ಬಲೆ ಹೆಣೆದಿದೆ. ಶುಕ್ರವಾರ ವಿಶೇಷ ಡ್ರೈವ್ ಮಾಡುವ ಮೂಲಕ ನೂರಾರು ಬೈಕ್‌ಗಳನ್ನು ಸೀಜ್ ಮಾಡಿ, ವಾಹನ ಸವಾರರಿಗೆ ಪೊಲೀಸ್ ಇಲಾಖೆ ಬಿಸಿ ಮುಟ್ಟಿಸಿದೆ. ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಅವರೇ ಸ್ವತಃ ಅಖಾಡಕ್ಕೆ ಇಳಿದು, ವಿಶೇಷ ಡ್ರೈವ್ ಬಗ್ಗೆ ಕಣ್ಣಿಟ್ಟಿದ್ದು, ಅಧಿಕಾರಿಗಳಿಗೂ ಚುರುಕು ಮುಟ್ಟಿಸಿದರು.

ಪ್ರಮುಖ ಸರ್ಕಲ್‌ಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸುವ ಮೂಲಕ ಸಂಚಾರ ನಿಯಮ ಉಲ್ಲಂಘನೆ ತಡೆಗೆ ಪೊಲೀಸ್ ಇಲಾಖೆ ಕಾರ್ಯಪ್ರವೃತ್ತವಾಗಿತ್ತು. ಈ ಮೂಲಕ, ಸಂಚಾರಿ ನಿಯಮ ಉಲ್ಲಂಘನೆ ಮಾಡಿದ ಸವಾರರ ಮನೆಗೆ ನೇರ ದಂಡದ ಪಾವತಿ ತಲುಪುತ್ತಿದೆ. ಇದನ್ನೆಲ್ಲ ಗಮನಿಸಿದ ಖದೀಮರು, ಸಂಚಾರಿ ನಿಯಮಗಳನ್ನು ಯಥಾವತ್ತಾಗಿ ಪಾಲಿಸುವ ಬದಲಾಗಿ, ಕೆಲ ಬೈಕ್ ಸವಾರರು ಹಾಗೂ ಕಾರ್ ಚಾಲಕರು ನಂಬರ್ ಪ್ಲೇಟ್ ತೆಗೆದು, ಇನ್ನೂ ಕೆಲವರು ನಕಲಿ ನಂಬರ್ ಪ್ಲೇಟ್ ಹಾಕಿ ಓಡಾಡುತ್ತಿದ್ದರು.

ಇಂತವರ ಅಟಾಟೋಪಗಳಿಗೆ ಕಡಿವಾಣ ಹಾಕಲು ಅಲರ್ಟ್ ಆದ ಪೊಲೀಸ್ ಇಲಾಖೆ ಶುಕ್ರವಾರ ವಿಶೇಷ ಡ್ರೈವ್ ನಡೆಸಿ, ಬೈಕ್ ಸವಾರರು, ವಾಹನ ಚಾಲಕರಿಗೆ ಬಿಸಿ ಮುಟ್ಟಿಸಲು ಮುಂದಾಗಿದ್ದರು. ನಂಬರ್ ಪ್ಲೇಟ್ ಇಲ್ಲದ ಸುಮಾರು 500ಕ್ಕೂ ಹೆಚ್ಚು ಬೈಕ್‌ಗಳನ್ನು ಜಪ್ತು ಮಾಡಿ ಸವಾರರಿಗೆ ಪಾಠ ಕಲಿಸಿದ್ದಾರೆ. ಅವಳಿ ನಗರದ ಆರು ಕಡೆಗಳಲ್ಲಿ ಆರು ತಂಡಗಳು ವಿಶೇಷ ಡ್ರೈವ್ ಮೂಲಕ ನಿಯಮ ಉಲ್ಲಂಘಿಸುವವರಿಗೆ ಪಾಠ ಕಲಿಸಿದರು. ಸ್ವತಃ ಕಾರ್ಯಾಚರಣೆಗಿಳಿದ ಎಸ್‌ಪಿ ಬಿ.ಎಸ್. ನೇಮಗೌಡ ಅಧಿಕಾರಿಗಳ ಕಾರ್ಯಾಚರಣೆಯ ಬಗ್ಗೆ ಗಮನವಹಿಸಿದ್ದರು.

### ಇಷ್ಟಲಿಂಗ ಮಹಾಪೂಜಾ, ಧರ್ಮ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಧರ್ಮವೆಂದರೆ ಅಶ್ವತ್ಥ ವೃಕ್ಷ ಇದ್ದಂತೆ

■ವಿಜಯಸಾಕ್ಷಿ ಸುದ್ದಿ, ಕೊಲನಪಾಕ (ತೆಲಂಗಾಣ)

ಧರ್ಮದ ನೆರಳಿನಲ್ಲಿ ಮನುಷ್ಯ ಸಂತೋಷ, ಶಾಂತಿ ಪಡೆಯಬೇಕು. ನೆರಳು ಕೊಡುವ ಮರವನ್ನು ಕತ್ತರಿಸುವ ಕೃತಘ್ನನಾಗಬಾರದು. ಧರ್ಮದ ವೃಕ್ಷ ಬರಿಯ ವೃಕ್ಷವಲ್ಲ. ಅದೊಂದು ಅದ್ಭುತ ಅಶ್ವತ್ಥ ವೃಕ್ಷ. ಇದು ಸಮೃದ್ಧಿ, ಶಾಂತಿ, ತಂಗಾಳಿ ನೀಡುವ ಹೆಮ್ಮರವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಕೊಲನಪಾಕ ಸ್ವಯಂಭು ಶ್ರೀ ಸೋಮೇಶ್ವರ ಕ್ಷೇತ್ರದಲ್ಲಿ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಕಣ್ಣು ಮುಚ್ಚಿ ತೆರೆಯುವಷ್ಟರಲ್ಲಿ ಗಿಡ ಮರವಾಗಿ ಬೆಳೆಯುವುದಿಲ್ಲ. ಹರಿಯುವ ಹಳ್ಳ ಒಮ್ಮೆಲೇ ಸಾಗರವಾಗುವುದಿಲ್ಲ. ಸಂಸ್ಕಾರ-ಸದ್ವಿಚಾರದಿಂದ ಬದುಕು ಬಲಗೊಳ್ಳಲು ಸಾಧ್ಯ. ಏಕಾಗ್ರತೆ ಮತ್ತು ಆಧ್ಯಾತ್ಮ ಸಾಧನೆಯಿಂದ ಜೀವನದಲ್ಲಿ ಶ್ರೇಯಸ್ಸನ್ನು ಕಾಣಬೇಕಾಗಿದೆ. ಸುಂದರವಾದ ಉಡುಗೆ-ತೊಡುಗೆಗಳಿಂದ ವ್ಯಕ್ತಿತ್ವವನ್ನು ಬದಲಿಸಿಕೊಳ್ಳಬಹುದೇ ವಿನಃ ಬದುಕನ್ನು ಬದಲಿಸಿಕೊಳ್ಳಲು ಸಾಧ್ಯವಾಗುವುದಿಲ್ಲವೆಂದು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಮನುಷ್ಯ ಜೀವನದಲ್ಲಿ ಕ್ಷೇತ್ರ, ತೀರ್ಥ ಮತ್ತು ಗುರು ಯಾತ್ರೆ ಮಾಡಿ ಜೀವನ ಪರಿಶುದ್ಧ ಮಾಡಿಕೊಳ್ಳಲು ಪ್ರಯತ್ನಿಸಬೇಕೆಂದರು.

ಮೇಹಕರ ಹಿರೇಮಠದ ರಾಜೇಶ್ವರ ಶ್ರೀ ಮತ್ತು ಎಂ.ಚಂದರಗಿ ಹಿರೇಮಠದ ವೀರಭದ್ರ ಶ್ರೀಗಳು ಶ್ರೀ ಕೊಲ್ಲಿಪಾಕಿ ಕ್ಷೇತ್ರದಲ್ಲಿ ಹಮ್ಮಿಕೊಂಡಿರುವ ಅಭಿವೃದ್ಧಿ ಕಾರ್ಯಗಳ ಬಗೆಗೆ ಭಕ್ತರಿಗೆ ವಿವರಿಸಿದರು. ಮಳಲಿ ಮಠದ ಡಾ. ನಾಗಭೂಷಣ ಶ್ರೀಗಳು, ಹರಪನಹಳ್ಳಿ ವರಸದ್ಯೋಜಾತ ಶ್ರೀಗಳು, ಕೂಡ್ಲಿಗಿ ಹಿರೇಮಠದ ಡಾ.ಪ್ರಶಾಂತ ಸಾಗರ ಶ್ರೀಗಳು, ಲಿಂಗಸುಗೂರು ಮಾಣಿಕ್ಯೇಶ್ವರಿ ಆಶ್ರಮದ ಮಾತಾ ನಂದಿಕೇಶ್ವರಿ ಅಮ್ಮನವರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಮೊಟ್ಟಮೊದಲಿಗೆ ಹರಪನಹಳ್ಳಿ ಪಟ್ಟಣದ ಎಂ.ಕೊಟ್ರೇಶಪ್ಪ ಅವರ 'ಶ್ರೀ ವೀರಭದ್ರಸ್ವಾಮಿ ಗುಗ್ಗುಳ' ಸೇವೆಗೆ ಪ್ರಜ್ವಲನ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಚಾಲನೆಯಿತ್ತರು.

ಶ್ರೀ ಪೀಠದ ಆಡಳಿತಾಧಿಕಾರಿ ಎಸ್.ಬಿ. ಹಿರೇಮಠ, ಹಗರಿಬೊಮ್ಮನಹಳ್ಳಿ ತಿಪ್ಪೇಸ್ವಾಮಿ, ಬೀರೂರು ಶಿವಸ್ವಾಮಿ, ಆರ್.ಆರ್. ಹಿರೇಮಠ, ಗಂಗಾವತಿ ಸೋಮನಾಥ ಕುಲಕರ್ಣಿ, ಶಿವಶರಣಪ್ಪ ಸೀರಿ, ಅಣ್ಣಾರಾವ ಬಿರಾದಾರ, ಗುರುಪಾದಪ್ಪ ಕಿಣಗಿ, ಗಿರಿಯಪ್ಪ ಮುತ್ಯಾ, ಬೆಂಗಳೂರಿನ ನಂದೀಶ ಮೊದಲಾದವರು ಉಪಸ್ಥಿತರಿದ್ದರು. ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶ್ರೀಗಳು ನಿರೂಪಿಸಿದರು. ಗಂಗಾಧರಸ್ವಾಮಿ ವೈದಿಕ ಬಳಗದವರು ಪೂಜಾ ಕಾರ್ಯಗಳನ್ನು ನೆರವೇರಿಸಿದರು.

## ಜ.7ರಂದು ಪರೀಕ್ಷಾ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಎನ್.ಎಂ.ಎಂ.ಎಸ್.( ನ್ಯಾಶನಲ್ ಮೀನ್ಸ್ ಕಮ್ ಮೆರಿಟ್ ಸ್ಕಾಲರ್ ಶಿಪ್ ) ಪರೀಕ್ಷೆಗಳು ಜನವರಿ 7 ರಂದು ಜರುಗಲಿವೆ. ಸದರಿ ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಸಲುವಾಗಿ ಜಿಲ್ಲೆಯ 25 ಪರೀಕ್ಷಾ ಕೇಂದ್ರಗಳ ಸುತ್ತಲೂ ಜನವರಿ 7 ರಂದು ಬೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು, ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್ , ಫೋಟೋ ಕಾಪಿಯರ್‌ಗಳನ್ನು ಬಂದ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿರಿಧಾನ್ಯ ಬಳಕೆ ಉತ್ತಮ ಆರೋಗ್ಯಕ್ಕೆ ಸಹಕಾರಿ


▸▸ಮೊದಲನೇ ಪುಟದಿಂದ

ಸಾರಜನಕ, ಲವಣ, ವಿಟಮಿನ್ ಮತ್ತು ನಾರಿನ ಅಂಶಗಳು ಸಿರಿಧಾನ್ಯಗಳಲ್ಲಿ ಹೆಚ್ಚಾಗಿವೆ. ಇವತ್ತಿನ ಹಲವು ಕಾಯಿಲೆಗಳಿಗೆ ರಾಸಾಯನಿಕ ಮಿಶ್ರಿತ ಆಹಾರ-ಪದಾರ್ಥ ಸೇವನೆ ಕೂಡ ಒಂದು ಪ್ರಮುಖ ಕಾರಣವಾಗಿದೆ ಎಂದು ಅಧ್ಯಯನಗಳು ಹೇಳುತ್ತಿವೆ. ಇದಕ್ಕೆ ಸಾವಯವ ಸಿರಿಧಾನ್ಯ ಸೇವನೆ ಉತ್ತಮ ಪರಿಹಾರ ಆಗುತ್ತಿದೆ ಎಂದರು.

2004ರಲ್ಲಿ ಸಾವಯವ ಕೃಷಿ ನೀತಿ, 2014ರಲ್ಲಿ ಪರಿಷ್ಕೃತ ಸಾವಯವ ಕೃಷಿ ನೀತಿಯನ್ನು ರಾಜ್ಯದಲ್ಲಿ ಜಾರಿಗೊಳಿಸಲಾಗಿದೆ. ಆ ಮೂಲಕ ಸವಯವ ಮತ್ತು ಸಿರಿಧಾನ್ಯ ಬೆಳೆ ಬೆಳೆಯಲು ನಮ್ಮ ಸರ್ಕಾರ ನಿರಂತರವಾಗಿ ಉತ್ತೇಜನ ನೀಡುತ್ತಿದೆ. ಇದರಿಂದ ಜನರ ಆರೋಗ್ಯಕ್ಕೂ ಬಹಳ ಸಹಕಾರಿಯಾಗುತ್ತಿದೆ ಎಂದು ಮುಖ್ಯಮಂತ್ರಿಗಳು ವಿವರಿಸಿದರು.

ಕೃಷಿ ಸಚಿವ ಎನ್. ಚ' ಲು ವ' ರಾ ಂು' ು ಸ್ವಾ ಮಿ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಮುಖ್ಯಮಂತ್ರಿಗಳ ರಾಜಕೀಯ ಸಲಹೆಗಾರರಾದ ಬಿ.ಆರ್. ಪಾಟೀಲ್, ಉತ್ತರ ಪ್ರದೇಶ ಸರ್ಕಾರದ ಕೃಷಿ ಸಚಿವ ಸೂರ್ಯ ಪ್ರತಾಪ್ ಸಾಹಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಶಾಸಕರುಗಳಾದ ವಿನಯ್ ಕುಲಕರ್ಣಿ, ಸುಧಾಮ ದಾಸ್, ರಾಜೂಗೌಡ, ವಿನಯ್ ಕುಲಕರ್ಣಿ, ದಿನೇಶ್ ಗೂಳಿಗೌಡ, ಕೋನರೆಡ್ಡಿ ಸೇರಿ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಮಹಾಪೂಜೆ, ಇರುಮುಡಿ ಕಾರ್ಯಕ್ರಮ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಕಣಗಿನಹಾಳ ರಸ್ತೆಯಲ್ಲಿರುವ ಎನ್.ಎಸ್. ಹೀರೆಮನಿ ಪಾಟೀಲ ಸನ್ನಿಧಾನದಲ್ಲಿ ಜ.6ರ ಮುಂಜಾನೆ 11.30 ಗಂಟೆಗೆ 33ನೇ ವರ್ಷದ ಅಯ್ಯಪ್ಪ ಸ್ವಾಮಿ ಮಹಾಪೂಜೆ ಹಾಗೂ ಮಧ್ಯಾಹ್ನ 1 ಗಂಟೆಗೆ ಅನ್ನ ಸಂತರ್ಪಣೆ ಕಾರ್ಯಕ್ರಮ ನೆರವೇರಲಿದೆ.

ಜ.8ರ ಮುಂಜಾನೆ 8 ಗಂಟೆಗೆ ಇರುಮುಡಿ ಕಟ್ಟುವುದು, ಸಂಜೆ 4 ಗಂಟೆಗೆ ಸನ್ನಿಧಾನದಿಂದ ನಗರದ ಜೆ.ಟಿ ಕಾಲೇಜು ಬಳಿಯಿರುವ ವರಸಿದ್ಧಿ ವಿನಾಯಕ ದೇವಸ್ಥಾನದವರೆಗೆ ಪಾದಯಾತ್ರೆಯಲ್ಲಿ ತೆರಳಿ, ಶಬರಿಮಲೈ ಯಾತ್ರೆಗೆ ಹೊರಡಲಾಗುವುದು ಎಂದು ಪ್ರಸಾದ ಕೋಡಿತ್ಕರ ಗುರುಸ್ವಾಮಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಬನ್ನಿಕೊಪ್ಪದಲ್ಲಿ ಅಯ್ಯಪ್ಪಸ್ವಾಮಿ ಮಹಾಪೂಜೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬನ್ನಿಕೊಪ್ಪ ಗ್ರಾಮದ ಶ್ರೀ ಮಣಿಕಂಠ ಅಯ್ಯಪ್ಪಸ್ವಾಮಿ ಸೇವಾ ವೃಂದದ ವತಿಯಿಂದ ಜ.6ರಂದು 9ನೇ ವರ್ಷದ ಅಯ್ಯಪ್ಪಸ್ವಾಮಿ ಮಹಾಪೂಜೆ ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮ ಜರುಗಲಿದೆ.

ಜಪದಕಟ್ಟಿಮಠ ಮೈಸೂರು ಮತ್ತು ಬನ್ನಿಕೊಪ್ಪದ ಡಾ. ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸವರು. ದೀಕ್ಷಾ ಗುರು ಮಲ್ಲು ಗುರುಸ್ವಾಮಿಗಳ ನೇತೃತ್ವದಲ್ಲಿ ಪೂಜಾ ಕಾರ್ಯಕ್ರಮಗಳು ಜರುಗಲಿವೆ. ಬೆಳಿಗ್ಗ 8 ಗಂಟೆಗೆ ಜ್ಯೋತಿ ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಪೂಜ್ಯರಿಂದ ಆಶೀರ್ವಚನ ತದನಂತರ ಮಧ್ಯಾಹ್ನ 1.30ಕ್ಕೆ ಅನ್ನಸಂತರ್ಪಣೆ ನಡೆಯಲಿದೆ.

ಜ.8ರ ಬೆಳಿಗ್ಗ 7 ಗಂಟೆಗೆ ಇರುಮುಡಿ ಕಟ್ಟುವ ಕಾರ್ಯಕ್ರಮ, ಸಂಜೆ 6 ಗಂಟೆಗೆ ಸನ್ನಿಧಾನದಿಂದ ಶಬರಿಮಲೈ ಯಾತ್ರೆಗೆ ತೆರಳಲಿದ್ದು, ಭಕ್ತಾಧಿಗಳು ಹೆಚ್ಚಿನ ಸಂಖೆಯಲ್ಲಿ ಈ ಎಲ್ಲ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕೆಂದು ಸಮಿತಿಯ ಪ್ರಕಟಣೆ ತಿಳಿಸಿದೆ.

## ಕುಶಾಲ ಕರಾಟೆ ಕ್ಲಬ್‌ನ ವಿದ್ಯಾರ್ಥಿಯ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಶ್ವವಿದ್ಯಾಲಯದ ಅಂತರ್ ಮಹಾವಿದ್ಯಾಲಯಗಳ 2023-24ನೇ ಸಾಲಿನ ಕ್ರೀಡಾ ಸ್ಪರ್ಧೆಗಳಲ್ಲಿ ನಗರದ ಕುಶಾಲ ಕರಾಟೆ ಕ್ಲಬ್‌ನ ವಿದ್ಯಾರ್ಥಿ ಮೊಹಮ್ಮದ ಪರಾಹತ ಸಿರಾಜುದ್ದೀನ ನಾಗನೂರ ಇವರು ಕರಾಟೆ ವಿಭಾಗದ 50 ಕೆ.ಜಿ ಕುಮಟೆಯಲ್ಲಿ ಪ್ರಥಮ ಸ್ಥಾನ ಪಡೆದು ಗದಗ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಇವರಿಗೆ ತರಬೇತಿ ನೀಡಿದ ಕುಶಾಲ ಕರಾಟೆ ಕ್ಲಬ್‌ನ ಮುಖ್ಯ ತರಬೇತುದಾರ ಗೈಬುಸಾಬ ಕಲೆಬಾಯಿಯವರಿಗೆ ಕುಶಾಲ ಕರಾಟೆ ಕ್ಲಬ್ ಸಂಸ್ಥಾಪಕ ಸುಭಾಸ ಪವಾರ, ತರಬೇತುದಾರ ಬಿ.ಕೆ. ಮುಲ್ಲಾ, ಕಮಿಟಿಯ ಸದಸ್ಯರು, ಬಸವರಾಜ ಸತ್ಯಪ್ಪನಮಠ, ವಿಜಯ ಹಿರೇಮಠ, ಬಸವರಾಜ ಮುದೇಗೊನ್ನವರ, ಅಶೋಕ ಕೊಳ್ಳಿ, ಸಿರಾಜುದ್ದೀನ ನಾಗನೂರ, ಸಮೀರ, ಆದಿಲ್, ಐಶ್ವರ್ಯ, ಮಹಮ್ಮದ ಪುರಖಾನ, ಅರುಣ, ರಾಜೇಸಾಬ, ಕಾರ್ತಿಕ, ಶ್ರೀಶಾಂತ ಸೇರಿದಂತೆ ಪಾಲಕರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ಏಕರೂಪ ಶುಲ್ಕ ಸಂಹಿತೆ ಜಾರಿಗೆ ಉನ್ನತ ಶಿಕ್ಷಣ ಇಲಾಖೆಗೆ ತಜ್ಞರ ಸಮಿತಿ ವರದಿ: ವಿದ್ಯಾರ್ಥಿಗಳಲ್ಲಿ ಅಸಮಾಧಾನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿರುವ ಎಲ್ಲಾ 32 ಸರ್ಕಾರಿ ವಿಶ್ವವಿದ್ಯಾಲಯಗಳಿಗೆ ಏಕರೂಪದ ಶುಲ್ಕ ಸಂಹಿತೆ ತರಲು ತಜ್ಞರ ಸಮಿತಿಯ ವರದಿಯನ್ನು ಉನ್ನತ ಶಿಕ್ಷಣ ಇಲಾಖೆ ಅಂಗೀಕರಿಸಿದೆ. ವರದಿಯು ರಾಜ್ಯದಲ್ಲಿನ ಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಿಗೆ ಅರ್ಜಿಗಳು, ಬೋಧನೆ, ಪರೀಕ್ಷೆಗಳು, ಪರಿವೀಕ್ಷಕರು ಮತ್ತು ಮೌಲ್ಯಮಾಪಕರು ಸಂಭಾವನೆಗಾಗಿ ಶುಲ್ಕ ಸಂಹಿತೆಯನ್ನು ನಿಗದಿಪಡಿಸಿದೆ.

ಆದರೆ ಇದು ವೃತ್ತಿಪರ ಕೋರ್ಸ್‌ಗಳನ್ನು ಒಳಗೊಂಡಿಲ್ಲದ ಕಾರಣ ವಿದ್ಯಾರ್ಥಿ ಸಮುದಾಯ ಸಂತಸಗೊಂಡಿಲ್ಲ. ವಾರ್ಷಿಕವಾಗಿ ಐಚ್ಛಿಕ ಶೇಕಡಾ 10ರಿಂದ 20ರಷ್ಟು ಶುಲ್ಕ ಹೆಚ್ಚಳವು ಎರಡು ವರ್ಷಗಳಲ್ಲಿ ಯಾವುದೇ ವ್ಯತ್ಯಾಸವನ್ನು ಉಂಟುಮಾಡುವುದಿಲ್ಲ, ಇದು ಬಡ ವಿದ್ಯಾರ್ಥಿಗಳ ಮೇಲೆ ದೊಡ್ಡ ರೀತಿಯಲ್ಲಿ ಪರಿಣಾಮ ಬೀರುತ್ತದೆ ಎನ್ನುತ್ತಾರೆ.

ಉಪಾಧ್ಯಕ್ಷ ಡಾ.ವೈ.ಎಸ್.ಸಿದ್ದೇಗೌಡ ನೇತೃತ್ವದ ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ (KHEC) ವರದಿಯು ವಿಶ್ವವಿದ್ಯಾಲಯಗಳು ಯಾವುದೇ ಶೈಕ್ಷಣಿಕ ವರ್ಷದಿಂದ ಹೊಸ ಶುಲ್ಕ ರಚನೆಯನ್ನು ಜಾರಿಗೆ ತರಬಹುದು ಎಂದು ಸೂಚಿಸಿದೆ. ವಿಶ್ವವಿದ್ಯಾಲಯಗಳು ವರ್ಷಕ್ಕೆ ಶೇಕಡಾ 10ರಷ್ಟು ಅಥವಾ ಪ್ರತಿ ಎರಡು ವರ್ಷಗಳಿಗೊಮ್ಮೆ ಶೇಕಡಾ 20ರಿಂದ 25ರಷ್ಟು ಶುಲ್ಕವನ್ನು ಹೆಚ್ಚಿಸಬಹುದು. ಈ ಸಲಹೆಯನ್ನು ಸರ್ಕಾರವು ಅಕ್ಟೋಬರ್ 16, 2023 ರಂದು ಅಂಗೀಕರಿಸಿತು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ನಂತಹ ವೃತ್ತಿಪರ ಕೋರ್ಸ್‌ಗಳನ್ನು ಬೋಧಿಸುವ ವಿಶ್ವವಿದ್ಯಾಲಯಗಳಿಗೆ ಇದು ಅನ್ವಯಿಸುವುದಿಲ್ಲ. ಹೊಸ ಶುಲ್ಕ ರಚನೆ ಜಾರಿಯಾದರೆ ಎರಡು ವರ್ಷಗಳಲ್ಲಿ ಸರ್ಕಾರಿ ವಿಶ್ವವಿದ್ಯಾಲಯಗಳ ಪದವಿ ಶುಲ್ಕ ಖಾಸಗಿ ಪದವಿ ಕಾಲೇಜುಗಳ ಮಟ್ಟ ತಲುಪಲಿದೆ ಎಂದು ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್ ಕಾರ್ಯದರ್ಶಿ ಮಹಾಂತೇಶ ಬಿಳ್ಳೂರು ಹೇಳುತ್ತಾರೆ.

ಅನೇಕ ವಿಶ್ವವಿದ್ಯಾಲಯಗಳು ಅನುದಾನದ ಕೊರತೆಯ ನೆಪದಲ್ಲಿ ಶುಲ್ಕವನ್ನು ಹೆಚ್ಚಿಸುತ್ತಿವೆ, ಇದು ಸರ್ಕಾರಿ ಕಾಲೇಜುಗಳು ಮತ್ತು ಸರ್ಕಾರಿ ವಿಶ್ವವಿದ್ಯಾಲಯಗಳ ನಡುವೆ ಭಾರಿ ಶುಲ್ಕ ವ್ಯತ್ಯಾಸಕ್ಕೆ ಕಾರಣವಾಗುತ್ತದೆ ಎಂದು ಹೇಳಿದರು. ಸರಕಾರವು ಸರಕಾರಿ ಪದವಿ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಿಗೆ ಒಂದೇ ರೀತಿಯ ಶುಲ್ಕವನ್ನು ಜಾರಿಗೊಳಿಸಬೇಕು. ಆಗ ಮಾತ್ರ ಬಡ ವಿದ್ಯಾರ್ಥಿಗಳು ಅವರ ಅಭಿವೃದ್ಧಿಗಾಗಿ ಸ್ಥಾಪಿಸಲಾದ ವಿಶ್ವವಿದ್ಯಾಲಯಗಳಲ್ಲಿ ಓದಬಹುದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

### ಆರೋಗ್ಯ ಸಚಿವರಿಂದ ಕಿಮ್ಸ್ ಆವರಣದಲ್ಲಿ 10 ಹಾಸಿಗೆಯ ಐಸಿಯು, ಟೆಲಿ ಐಸಿಯುಗೆ ಚಾಲನೆ

# ರಾಜ್ಯದ 41 ಆಸ್ಪತ್ರೆಗಳಲ್ಲಿ ಟೆಲಿ ಐಸಿಯು ಸ್ಥಾಪನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಸರಕಾರ ಕರ್ನಾಟಕದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ ಮತ್ತು ಜಲುಠತ ಫೌಂಡೇಶನ್ ಸಹಯೋಗದಲ್ಲಿ 10 ಹಾಸಿಗೆಯ ಐಸಿಯು ಯೋಜನೆಯ ಭಾಗವಾಗಿ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆ ಹಾಗೂ ಉತ್ತರ ಕರ್ನಾಟಕದ 10 ತಾಲೂಕು ಆಸ್ಪತ್ರೆಗಳಿಗೆ ಸಂಪರ್ಕಿಸುವ ಟೆಲಿ ಐಸಿಯು ಕ್ಲಸ್ಟರ್‌ನ್ನು ಪ್ರಾರಂಭಿಸಲಾಗುತ್ತಿದೆ.

10 ಹಾಸಿಗೆಯ ಐಸಿಯು ಕಾರ್ಯಕ್ರಮವು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸರ್ಕಾರದ ನಡುವಿನ ನೂತನ ಖಾಸಗಿ ಮತ್ತು ಸಾರ್ವಜನಿಕ ಸಹಭಾಗಿತ್ವ ಯೋಜನೆಯಾಗಿದೆ. ಇದನ್ನು ಕರ್ನಾಟಕದ ಇ-ಗವರ್ನಮೆಂಟ್ಸ್ ಫೌಂಡೇಶನ್ ಮತ್ತು ಕರುಣಾ ಟ್ರಸ್ಟ್ ನಿರ್ವಹಿಸಲಿವೆ.

ಜ.6ರಂದು ಹುಬ್ಬಳ್ಳಿ ಕಿಮ್ಸ್ ಆವರಣದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಹೊಸ ಟೆಲಿಐಸಿಯು ಹಬ್‌ಗೆ ಚಾಲನೆ ನೀಡಲಿದ್ದಾರೆ.

ಈ ಟೆಲಿ ಐಸಿಯು ಕೇಂದ್ರವು ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯ ತಜ್ಞ ವೈದ್ಯರಿಗೆ ದೂರದಿಂದಲೇ ಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲು ಮತ್ತು ಪರಿಶೀಲಿಸಲು ಅನುಮತಿಸುತ್ತದೆ. 10 ಆಸ್ಪತ್ರೆಗಳಲ್ಲಿ ದಾಖಲಾದ ಯಾವುದಾದರೂ ರೋಗಿಗಳಿಗೆ ಆರೋಗ್ಯ ಸಲಹೆ ನೀಡಲು ಮತ್ತು ಈ ಐಸಿಯುಗಳಲ್ಲಿ ರೋಗಿಗಳ ಆರೈಕೆಯ ಗುಣಮಟ್ಟವನ್ನು ಸುಧಾರಿಸಲು ಸ್ಥಳೀಯ ವೈದ್ಯರು ಮತ್ತು ದಾದಿಯರೊಂದಿಗೆ ತಜ್ಞ ವೈದ್ಯರು



ಸಾಂದರ್ಭಿಕ ಚಿತ್ರ

ಸಂಪರ್ಕ ಸಾಧಿಸಿ, ಸಂವಹನ ನಡೆಸುತ್ತಾರೆ.

10 ಹಾಸಿಗೆಯ ಐಸಿಯು ಯೋಜನೆಯು ದೇಶದಾದ್ಯಂತ ಸಣ್ಣ ಪಟ್ಟಣಗಳು ಮತ್ತು ಹಳ್ಳಿಗಳಿಗೆ ಕ್ಲಿಷ್ಟಕರವಾದ ಆರೋಗ್ಯ ಸೇವೆಯನ್ನು ಪೂರೈಸುವಂತೆ ಮಾಡುವ ಗುರಿಯನ್ನು ಹೊಂದಿದೆ ಮತ್ತು ಪ್ರಸ್ತುತ ಸರ್ಕಾರದಲ್ಲಿ 10 ಹಾಸಿಗೆಯ ಐಸಿಯುಗಳನ್ನು ಸ್ಥಾಪಿಸಿದೆ. ದೇಶದ 9 ರಾಜ್ಯಗಳ 206 ಜಿಲ್ಲೆಗಳಲ್ಲಿ ಈ ಆಸ್ಪತ್ರೆಗಳಿವೆ.

ಈ ಯೋಜನೆಯು ಐದು ಘಟಕಗಳನ್ನು ಒಳಗೊಂಡಿದ್ದು, ಜಿಲ್ಲೆಯ ಇತರ ಆಸ್ಪತ್ರೆಗಳಲ್ಲಿ ಅತ್ಯಾಧುನಿಕ ಐಸಿಯು ವೈದ್ಯಕೀಯ ಉಪಕರಣಗಳನ್ನು ಒದಗಿಸುವುದು, ಸ್ಥಾಪಿಸುವುದು ಮತ್ತು ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್ ಸಂಯೋಜನೆಯೊಂದಿಗೆ ಹೆಲ್ತ್‌ಕೇರ್ ಪ್ಲಾಟ್‌ಫಾರ್ಮ್ ಅನ್ನು ನಿಯೋಜಿಸುವದಾಗಿದೆ.

ದೂರದ ಆಸ್ಪತ್ರೆಗಳಿಗೆ ತಜ್ಞರನ್ನು ಸಂಪರ್ಕಿಸುವ, ಸರ್ಕಾರಿ ವೈದ್ಯಕೀಯ ಕಾಲೇಜುಗಳು, ಜಿಲ್ಲಾ ಆಸ್ಪತ್ರೆಗಳಲ್ಲಿ ಖಿಜಟಜಖಅಗ ಹಬ್‌ಗಳೊಂದಿಗೆ ಹಬ್-ಎನ್-ಸ್ಪೋಕ್ ಮಾದರಿಯಲ್ಲಿ ಟೆಲಿ ಐಸಿಯು ವ್ಯವಸ್ಥೆಯನ್ನು ನಿಯೋಜಿಸುವದಾಗಿದೆ.

ವೈದ್ಯಕೀಯ ಉಪಕರಣ, ಕೇರ್ ಸಾಫ್ಟ್‌ವೇರ್, ಕ್ರಿಟಿಕಲ್ ಕೇರ್ ತರಬೇತಿ ಮತ್ತು ಐಸಿಯು ಪ್ರೋಟೋಕಾಲ್‌ಗಳನ್ನು ಪ್ರಮಾಣೀಕರಿಸುವ ಕುರಿತು ಸಮಗ್ರ ತರಬೇತಿ ನೀಡುವುದು ಮತ್ತು ಯೋಜನೆಯ ಪ್ರಭಾವ ಮತ್ತು ಸಮರ್ಥನೀಯತೆಯನ್ನು ಗರಿಷ್ಠಗೊಳಿಸಲು ಸಮುದಾಯದ ಭಾಗವಹಿಸುವಿಕೆಯನ್ನು ಹೆಚ್ಚಿಸುವುದಾಗಿದೆ.

10 ಹಾಸಿಗೆಯ ಐಸಿಯು ಯೋಜನೆಯಡಿ ರಾಜ್ಯದ 41 ಆಸ್ಪತ್ರೆಗಳಲ್ಲಿ ಟೆಲಿ ಐಸಿಯು ಸ್ಥಾಪಿಸಿದ್ದು, ಕರ್ನಾಟಕದ ಪ್ರತಿ ಜಿಲ್ಲೆಯನ್ನು ಎರಡು ಟೆಲಿ ಐಸಿಯು ಹಬ್‌ಗಳೊಂದಿಗೆ ಮೈಸೂರಿನ ಕೆಆರ್ ಆಸ್ಪತ್ರೆ ಮತ್ತು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗಳು ಕ್ರಮವಾಗಿ 13 ಮತ್ತು 10 ಸ್ಪೋಕ್ ಆಸ್ಪತ್ರೆಗಳನ್ನು ಸಂಪರ್ಕಿಸುತ್ತವೆ. ಬೆಂಗಳೂರು ಮತ್ತು ಬಳ್ಳಾರಿಯಲ್ಲಿ ಇನ್ನೂ ಎರಡು ಟೆಲಿ ಐಸಿಯು ಹಬ್‌ಗಳನ್ನು ಪ್ರಾರಂಭಿಸಲು ರಾಜ್ಯ ಸರ್ಕಾರವು ಕ್ರಮ ವಹಿಸಿದೆ.

ಈ ಯೋಜನೆಗೆ ಕ್ರಿಪ್ಲೋ ರಿಲೀಫ್, ಗಿವ್ ಇಂಡಿಯಾ, ಎಚ್‌ಡಿಎಫ್‌ಸಿ ಬ್ಯಾಂಕ್ ಪರಿವರ್ತನ್, ವಿನೋದ್ ಖೋಸ್ಲಾ ಮತ್ತು ಮೈಸೂರು ಕೆಆರ್ ಆಸ್ಪತ್ರೆಯ 10 ಬೆಡ್ ಐಸಿಯು ಮತ್ತು ಟೆಲಿ ಐಸಿಯು ಹಬ್‌ನಿಂದ ಧನಸಹಾಯವನ್ನು ಶ್ರೀಕಾಂತ್ ನಾದಮುನಿ ಮಾಡಿದ್ದಾರೆ. ಐಐಟಿ ಬಾಂಬೆಯಲ್ಲಿ ಇ-ಗವರ್ನಮೆಂಟ್ಸ್ ಫೌಂಡೇಶನ್, ಕರುಣಾ ಟ್ರಸ್ಟ್, ಹ್ಯಾಮಿಲ್ಟನ್ ಮೆಡಿಕಲ್, ಗೂಗಲ್ ಕೌಡ್ ಮತ್ತು ಕೊಯಿಟಾ ಸೆಂಟರ್ ಫಾರ್ ಡಿಜಿಟಲ್ ಹೆಲ್ತ್ ಸೇರಿದಂತೆ ಹಲವಾರು ಎನ್‌ಜಿಓಗಳು ಮತ್ತು ಉದ್ಯಮ ಪಾಲುದಾರರು ಈ ಯೋಜನೆಯನ್ನು ಕಾರ್ಯಗತಗೊಳಿಸಲು ಒಗ್ಗೂಡಿದ್ದಾರೆ.

### ದಿ ಸಿ.ಬಿ. ಬಡ್ನಿ ಅವರ 80ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಡಾ.ಮಲ್ಲಿಕಾರ್ಜುನ ಶ್ರೀಗಳು

# ಸನ್ಮಾರ್ಗದಿಂದ ಮನುಷ್ಯನ ಜೀವನ ಸಾರ್ಥಕ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮುಳಗುಂದದ ಅಭಿವೃದ್ಧಿ, ಶಿಕ್ಷಣ ಕಾಳಜಿ, ಸಾಮಾಜಿಕ ಚಿಂತನೆಗಳ ಮೂಲಕ ಜನರನ್ನು ಸನ್ಮಾರ್ಗದಲ್ಲಿ ತೆಗೆದುಕೊಂಡು ಹೋದ ಕೀರ್ತಿ ದಿ ಸಿ.ಬಿ. ಬಡ್ನಿ ಅವರಿಗೆ ಸಲ್ಲುತ್ತದೆ ಎಂದು ಡಾ.ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ-1ರಲ್ಲಿ ದಿ ಸಿ.ಬಿ. ಬಡ್ನಿ ಅವರ ಸವಿನೆನಪಿಗಾಗಿ ಗೌರಮ್ಮಾ ಬಡ್ನಿ ಕೊಡಮಾಡಿದ ಸರಸ್ವತಿ ಮೂರ್ತಿಯ ಅನಾವರಣ, ಬಿ.ಸಿ. ಬಂಗಾರಿ ಶಾಲೆಯಲ್ಲಿನ ಸಭಾಭವನ ಉದ್ಘಾಟನೆ, ದಿ ಸಿ.ಬಿ. ಬಡ್ನಿ ಅವರ 80ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಮನುಷ್ಯನ ಜೀವನ ಸಾರ್ಥಕವಾಗಬೇಕಾದಲ್ಲಿ ಸಮಾಜ ಸೇವೆಯ ಜೊತೆಯಲ್ಲಿ ಕಾಯಕ ನಿಷ್ಠೆ, ಪರೋಪಕಾರ, ಸಾಮಾಜಿಕ ಚಿಂತನೆ, ಧಾರ್ಮಿಕ ಸಹಿಷ್ಣುತೆ,



ಶಿಕ್ಷಣ ಪ್ರೇಮ, ಎಲ್ಲರೊಂದಿಗೆ ಸಹಕಾರ ಮನೋಭಾವನೆಯಿಂದ ನಮ್ಮೆಲ್ಲರ ಮನದಲ್ಲಿ ಇಂದಿಗೂ ನೆಲೆಸಿರುವವರು ದಿ ಸಿ.ಬಿ. ಬಡ್ನಿ ಅವರು. ಅವರ ಚಿಂತನೆಗಳನ್ನು ನಾವೆಲ್ಲರೂ ನಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಂಡು ಸಾಗಿದಾಗ ಮತ್ತಷ್ಟು ಅಭಿವೃದ್ಧಿ ಹೊಂದಲು ಸಹಕಾರಿಯಾಗುತ್ತದೆ ಎಂದರು.

ದಿ ಸಿ.ಬಿ. ಬಡ್ನಿ ಅವರ 80ನೇ ಜನ್ಮದಿನಾಚರಣೆ ಅಂಗವಾಗಿ 'ಸಮಾಜಮುಖಿ ಕಾಯಕಯೋಗಿ ಪ್ರಶಸ್ತಿ'ಯನ್ನು ಎಂ.ಪಿ. ಮೆಣಸಿನಕಾಯಿ ಹಾಗೂ ಈರಪ್ಪ ಮೆಣಸಿನಕಾಯಿ ಅವರಿಗೆ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದ ನೇತೃತ್ವವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗದೇವರು, ಮುಖ್ಯ ಅತಿಥಿಗಳಾಗಿ ಎಸ್.ಎಂ. ನೀಲಗುಂದ, ಗೌರಮ್ಮಾ ಬಡ್ನಿ, ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಜೆ.ಎ. ಭಾವಿಕಟ್ಟಿ, ಎಸ್.ಎಂ. ನೀಲಗುಂದ, ಬಿ.ಸಿ. ಬಡ್ನಿ, ಎಸ್.ಸಿ. ಬಡ್ನಿ, ನಾಗರಾಜ ದೇಶಪಾಂಡೆ, ಅಶೋಕ ಸೋನಗೋಜಿ, ಡಾ. ಎಸ್.ಸಿ. ಚವಡಿ, ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಮಂಜುನಾಥ ಮಟ್ಟಿ, ಶಾಲಾ ಎಸ್‌ಡಿಎಂಸಿ ಸರ್ವ ಸದಸ್ಯರು, ಅಡುಗೆ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಇದ್ದರು.

# ಪತ್ರಕರ್ತರು ಸಾಮಾಜಿಕ ಹೊಣೆಗಾರಿಕೆಯಿಂದ ಕಾರ್ಯನಿರ್ವಹಿಸಿ; ಯು.ಟಿ. ಖಾದರ್

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಸಾಮಾಜಿಕ ಹೊಣೆಗಾರಿಕೆಯೊಂದಿಗೆ ಭವಿಷ್ಯದ ಭಾರತ ನಮ್ಮೆಲ್ಲರ ಗುರಿಯಾಗಬೇಕು. ಈ ನಿಟ್ಟಿನಲ್ಲಿ ಪತ್ರಕರ್ತರು ಕಾರ್ಯನಿರ್ವಹಿಸಬೇಕು ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ದ.ಕ.ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ವೀರಯೋಧ ದಿ.ಕ್ಯಾಪ್ಟನ್ ಎಂ.ವಿ.ಪ್ರಾಂಜಲ್ ಗೌರವಾರ್ಥ ಮಂಗಳೂರು ಹೊರವಲಯದ ಅಡ್ಯಾರ್ ಸಹ್ಯಾದ್ರಿ ಕಾಲೇಜು ಕ್ರೀಡಾಂಗಣದಲ್ಲಿ ಮೂರು ದಿನಗಳ ಕೆಯುಡಬ್ಲ್ಯೂಜೆ ರಾಜ್ಯ ಮಟ್ಟದ ಬ್ರ್ಯಾಂಡ್ ಮಂಗಳೂರು ರೋಹನ್ ಕಪ್-2024 ಕ್ರಿಕೆಟ್ ಪಂದ್ಯಾವಳಿಗೆ ಶುಕ್ರವಾರ ಸಂಜೆ ಚಾಲನೆ ನೀಡಿ ಅವರು ಮಾತನಾಡಿದರು.

ದ.ಕ.ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದೆ. ಬ್ರ್ಯಾಂಡ್ ಮಂಗಳೂರು ಸ್ಲೋಗನ್ ಮೂಲಕ ಇಲ್ಲಿನ ಪತ್ರಕರ್ತರು ಕರಾವಳಿಯ ರಾಯಭಾರಿಗಳಾಗಿದ್ದಾರೆ. ಪತ್ರಕರ್ತರ ಸಂಘಗಳ ಅನ್ಯೋನ್ಯ ಚಟುವಟಿಕೆಗಳು ಎಲ್ಲರಿಗೂ ಮಾದರಿಯಾಗಿದ್ದು, ಇದು ಸಾಮಾಜಿಕ ಹಿತಾಸಕ್ತಿಯನ್ನು ಬೆಳೆಸಲು ಸಹಕಾರಿಯಾಗಿದೆ ಎಂದು ಅವರು ಶ್ಲಾಘಿಸಿದರು.

ಎಸ್‌ಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಡಾ.ಎಂ. ಎನ್.ರಾಜೇಂದ್ರ ದೀಪ ಪ್ರಜ್ವಲನಗೊಳಿಸಿ ಕ್ರೀಡಾಕೂಟಕ್ಕೆ ಶುಭ ಹಾರೈಸಿದರು.

ಸಂಸದ ನಳಿನ್ ಕುಮಾರ್ ಕಟೀಲ್ ಟ್ರೋಫಿ



ಅನಾವರಣಗೊಳಿಸಿದರು. ಮಂಗಳೂರು ದಕ್ಷಿಣ ಶಾಸಕ ವೇದವ್ಯಾಸ್ ಕಾಮತ್ ಅವರು ಪ್ರದರ್ಶನ ಪಂದ್ಯ ಉದ್ಘಾಟಿಸಿದರು.

ವಿಧಾನ ಪರಿಷತ್ ಸದಸ್ಯ ಮಂಜುನಾಥ ಭಂಡಾರಿ ಅವರು ಬ್ರ್ಯಾಂಡ್ ಮಂಗಳೂರು ಫಲಕ ಅನಾವರಣಗೊಳಿಸಿದರು.

ರೋಹನ್ ಕಾರ್ಪೊರೇಷನ್ ಆಡಳಿತ ನಿರ್ದೇಶಕ ರೋಹನ್ ಮೊಂತೆರೋ ಅವರು ಕ್ರೀಡಾ ಸಂಚಿಕೆ ಅನಾವರಣಗೊಳಿಸಿದರು.

ಮೆರವಣಿಗೆಗೆ ಮಾಜಿ ಸಚಿವ ಅಭಯಚಂದ್ರ ಜೈನ್ ಚಾಲನೆ ನೀಡಿದರು. ಎಂಆರ್‌ಜಿ ಗ್ರೂಪ್ ಚೇರ್‌ಮೆನ್ ಪ್ರಕಾಶ್ ಶೆಟ್ಟಿ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿದರು. ಮೇಯರ್ ಸುಧೀರ್ ಶೆಟ್ಟಿ ಕಣ್ಣೂರು ಅವರು ಕಾರ್ಟೂನ್ ಪ್ರದರ್ಶನ ಉದ್ಘಾಟಿಸಿದರು. ಮಂಗಳೂರಿನ ಜಾಗತಿಕ ಬಂಟರ ಸಂಘಗಳ ಅಧ್ಯಕ್ಷ ಐಕಳ ಹರೀಶ್ ಶೆಟ್ಟಿಅವರು ಪಥ ಸಂಚಲನಕ್ಕೆ ಚಾಲನೆ ನೀಡಿದರು.

ಐಎಫ್‌ಡಬ್ಲ್ಯೂಜೆ ಪ್ರಧಾನ ಕಾರ್ಯದರ್ಶಿ ಮದನ್‌ಗೌಡ ಅವರು ಕ್ಯಾಪ್ ಹಸ್ತಾಂತರಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಿದ್ದರು.

ಕೆಐಒಸಿಎಲ್ ಅಧ್ಯಕ್ಷ ಸಾಮಿನಾಥನ್, ದ.ಕ. ಬಸ್ ಮಾಲೀಕರ ಸಂಘದ ಮಾಜಿ ಅಧ್ಯಕ್ಷ ದಿಲ್‌ರಾಜ್ ಆಳ್ವ, ರಾಜ್ಯ ಸಂಘದ ಪ್ರಧಾನ ಕಾರ್ಯದರ್ಶಿ ಜಿ ಸಿ ಲೋಕೇಶ, ರಾಜ್ಯ ಕಾರ್ಯ ಸಮಿತಿ ಸದಸ್ಯರಾದ ಬಾಳ ಜಗನ್ನಾಥ ಶೆಟ್ಟಿ, ಇಬ್ರಾಹಿಂ ಅಡ್ಕಸ್ಥಳ, ಪತ್ರಿಕಾ ಭವನ ಟ್ರಸ್ಟ್ ಅಧ್ಯಕ್ಷ ರಾಮಕೃಷ್ಣ ಆರ್., ಹಿರಿಯ ಪತ್ರಕರ್ತ ಮನೋಹರ ಪ್ರಸಾದ್, ಕ್ರೀಡಾಕೂಟ ಸಂಚಾಲಕ ಅನ್ನು ಮಂಗಳೂರು ಇದ್ದರು.

ದ.ಕ. ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀನಿವಾಸ ನಾಯಕ್ ಇಂದಾಜೆ ಸ್ವಾಗತಿಸಿದರು.

ಪ್ರಧಾನ ಕಾರ್ಯದರ್ಶಿ ಜಿತೇಂದ್ರ ಕುಂದೇಶ್ವರ ವಂದಿಸಿದರು. ಪತ್ರಕರ್ತರ ಸಂಘದ ರಾಷ್ಟ್ರೀಯ ಕಾರ್ಯಕಾರಿ ಸಮಿತಿ ಸದಸ್ಯ ಪಿ. ಬಿ. ಹರೀಶ್ ರೈ ನಿರೂಪಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka